ಸಂಪುಟ : 10 ಸಂಚಿಕೆ: 178 ಪುಟ : 4+2 ಬೆಲೆ: 3.00 ಗುರುವಾರ ಆಗಸ್ಟ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 178 Pages : 4+2 Price : 3.00 Thursday August 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾಡಳಿತ ಭವನದಲ್ಲಿ ಸದ್ಭಾವನಾ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಜನ್ಮದಿನದ ಅಂಗವಾಗಿ ಗದಗ ಜಿಲ್ಲಾಡಳಿತ ಭವನದಲ್ಲಿ ಸದ್ಭಾವನಾ ದಿನ ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳಿಗೆ ಹಾಗೂ ನೆರೆದ ಸಾರ್ವಜನಿಕರಿಗೆ ಸದ್ಭಾವನಾ ದಿನದ ಅಂಗವಾಗಿ ಪ್ರತಿಜ್ಞಾವಿಧಿ ಬೋಧಿಸಿದರು. ನಾನು ಭಾರತ ದೇಶದ ಜನರ ನಡುವೆ ಧರ್ಮ, ಭಾಷೆ, ಪ್ರದೇಶ ಅಥವಾ ಜಾತಿ ಭೇದವಿಲ್ಲದೆ ಭ್ರಾತೃತ್ವ, ಏಕತೆ ಮತ್ತು ಶಾಂತಿಯನ್ನು ಕಾಪಾಡುವಲ್ಲಿ ನನ್ನ ಪಾತ್ರವನ್ನು ನಿರ್ವಹಿಸುತ್ತೇನೆ. ಹಿಂಸೆ, ಅಸಹಿಷ್ಣುತೆ ಮತ್ತು ಅಸಮಾನತೆ ವಿರುದ್ಧ ನಿಲ್ಲುತ್ತೇನೆ ಎಂದು ಎಲ್ಲರೂ ಪ್ರತಿಜ್ಞೆ ಸ್ವೀಕರಿಸಿದರು.

ಸಮಾಜದಲ್ಲಿ ಸೌಹಾರ್ದತೆ, ಸಹಬಾಳ್ವೆ ಮತ್ತು ರಾಷ್ಟ್ರೀಯ ಏಕತೆ ಬೆಳೆಸುವುದು, ಧರ್ಮ, ಜಾತಿ, ಭಾಷೆ, ಪ್ರದೇಶಗಳ ಭೇದವಿಲ್ಲದೆ ಮಾನವೀಯತೆ, ಸಹಿಷ್ಣುತೆ ಮತ್ತು ಶಾಂತಿ ಕಾಪಾಡುವುದು, ದೇಶದ ಯುವಪೀಳಿಗೆಗೆ ಏಕತೆಯ ಸಂದೇಶ ನೀಡುವುದು ಈ ಸದ್ಭಾವನಾ ದಿನಾಚರಣೆಯ ಉದ್ದೇಶವಾಗಿದೆ.

ಈ ವೇಳೆ ಅಪರ ಜಿಲ್ಲಾಧಿಕಾರಿ ದುರಗೇಶ್ ಕೆ.ಆರ್, ಎಸಿ ಗಂಗಪ್ಪ ಎಂ, ಜಿಲ್ಲಾದಿಕಾರಿಗಳ ಕಾನೂನು ಸಲಹೆಗಾರ ಎಸ್.ಜಿ. ಪಲ್ಲೇದ, ಬಿಸಿಎಂ ಜಿಲ್ಲಾ ಅಧಿಕಾರಿ ಎಂ.ಎಂ. ತುಂಬರಮಟ್ಟಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

### ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ವತಿಯಿಂದ ವಿಶ್ವ ಜೈವಿಕ ಇಂಧನ ದಿನಾಚರಣೆ

# ನೂತನ ಜೈವಿಕ ಇಂಧನ ನೀತಿ ಶೀಘ್ರವೇ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಈಗಾಗಲೇ ನೂತನ ಜೈವಿಕ ಇಂಧನ ನೀತಿಯ ರಚನೆಯ ಕುರಿತು ಪೂರ್ವಭಾವಿ ಕಾರ್ಯ ಚಟುವಟಿಕೆಗಳನ್ನು ಪೂರ್ಣಗೊಳಿಸಿದೆ. ಶೀಘ್ರದಲ್ಲಿಯೇ ನೂತನ ಜೈವಿಕ ಇಂಧನ ನೀತಿಯು ರಾಜ್ಯ ಸರ್ಕಾರದಿಂದ ಘೋಷಣೆಯಾಗಲಿದೆ. ಈಗಾಗಲೇ ಅನುಷ್ಠಾನ ಪ್ರಕ್ರಿಯೆ ಮಾರ್ಗಸೂಚಿಗಳನ್ನು ಸಿದ್ಧಗೊಳಿಸಲಾಗಿದೆ ಎಂದು ಕರ್ನಾಟಕ ಜೈವಿಕ ಮಂಡಳಿ ಅಧ್ಯಕ್ಷ ಎಸ್.ಈ. ಸುಧೀಂದ್ರ ಹೇಳಿದರು.

ನಗರದ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದಲ್ಲಿ ಬುಧವಾರ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ವತಿಯಿಂದ ಆಯೋಜಿಸಿದ್ದ ಸದ್ಭಾವನ ದಿವಸ್, ಅಕ್ಷಯ ಊರ್ಜಾ ದಿವಸ್ ಮತ್ತು ವಿಶ್ವ ಜೈವಿಕ ಇಂಧನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

> ಯುವಕ, ಯುವತಿಯರು ಉದ್ಯಮಶೀಲತೆ ಬೆಳಸಿಕೊಂಡು ಇತರರಿಗೆ ಉದ್ಯೋಗ ನೀಡಬೇಕು. ಎಲ್ಲರೂ ಒಗ್ಗಟ್ಟಾಗಿದ್ದರೆ ಸಾಧನೆ ಮಾಡಬಹುದು. ನಮ್ಮನ್ನು ವಿಭಜಿಸುವ ಶಕ್ತಿಗಳಿಂದ ಎಚ್ಚರಿಕೆ ವಹಿಸಬೇಕು. ವಿಭಜಿಸುವ ಶಕ್ತಿಯನ್ನು ನಾಶ ಮಾಡಿ ಸಾಧನೆಗೆ ಗಮನ ಕೊಡಬೇಕು. ಅಂದಾಗ ಮಾತ್ರ ಸದ್ಭಾವನಾ ದಿವಸ ಆಚರಣೆ ಸಾರ್ಥಕವಾಗುತ್ತದೆ.
>
> **– ಸಂತೋಷ ಕೆಂಚಪ್ಪಣ್ಣವರ.**
> **ಗದಗ ಅರಣ್ಯ ಸಂರಕ್ಷಣಾಧಿಕಾರಿ.**




ಮುಂದಿನ 5 ವರ್ಷಗಳಲ್ಲಿ 1 ಲಕ್ಷ ಕೋಟಿಗೂ ಹೆಚ್ಚಿನ ಬಂಡವಾಳ ಹೂಡಿಕೆಯನ್ನು ಜೈವಿಕ ಇಂಧನ ಕ್ಷೇತ್ರದಲ್ಲಿ ನಿರೀಕ್ಷಿಸಲಾಗಿದೆ. 3 ಲಕ್ಷಕ್ಕೂ ಹೆಚ್ಚಿನ ಪ್ರತ್ಯಕ್ಷ ಹಾಗೂ ಪರೋಕ್ಷ ಉದ್ಯೋಗ ಸೃಜನೆ, ರೈತರ ಕುಟುಂಬಗಳ ಆದಾಯದ ಹೆಚ್ಚಳ, ಯುವ ಉದ್ದಿಮೆದಾರರಿಗೆ ಪ್ರೋತ್ಸಾಹ ದೊರೆಯಲಿದ್ದು, ಮುಂದಿನ ಐದು ವರ್ಷಗಳು ಕರ್ನಾಟಕ ರಾಜ್ಯದಲ್ಲಿ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಯಲ್ಲಿ ನಿರ್ಣಾಯಕವಾಗಲಿದೆ ಎಂದರು.

ಸದ್ಭಾವನಾ ದಿವಸ್ ಹಾಗೂ ಊರ್ಜಾ ದಿವಸ್ 21ನೇ ಶತಮಾನದ ವಿಜ್ಞಾನ, ತಂತ್ರಜ್ಞಾನ, ಮಾಹಿತಿ ಹಾಗೂ ಜೀವ ವಿಜ್ಞಾನಕ್ಕೆ ಮುನ್ನುಡಿ ಬರೆದ ದಿನಾಚರಣೆ. ರಾಷ್ಟ್ರೀಯ ಐಕ್ಯತೆ, ಸಾಮಾಜಿಕ ಸೌಹಾರ್ದತೆ ಮತ್ತು ಸಹಿಷ್ಣತೆ ಕುರಿತು ಜನತೆಯಲ್ಲಿ ಅರಿವು ಮತ್ತು ಜಾಗೃತಿ ಮೂಡಿಸುವುದು ಈ ಊರ್ಜಾ ದಿವಸ್ ಮುಖ್ಯ ಉದ್ದೇಶವಾಗಿದೆ. ಪ್ರಸ್ತುತ ಸನ್ನಿವೇಶದಲ್ಲಿ ಜೈವಿಕ ಇಂಧನ ಕ್ಷೇತ್ರದ ಉನ್ನತೀಕರಣ ಮತ್ತು ವಾಣಿಜ್ಯೀಕರಣ ಅತ್ಯಗತ್ಯವಾಗಿದೆ ಎಂದರು.

ಗದಗ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕೆಂಚಪ್ಪಣ್ಣವರ ಮಾತನಾಡಿ, ದೇಶದಲ್ಲಿ ಹಸಿರು ಕ್ರಾಂತಿ, ಕ್ಷೀರ ಕ್ರಾಂತಿ ನಡೆದಿದೆ. ಈಗ ಜೈವಿಕ ಕ್ರಾಂತಿ ನಡೆದಿರುವುದು ದೇಶದ ಅಭಿವೃದ್ಧಿಗೆ ಪೂರಕವಾಗಲಿದೆ. ಈ ಮೊದಲು ಗಿಡ-ಮರಗಳಿಂದ ಉತ್ಪಾದನೆ ಆಗುವ ಇಂಧನಗಳಿಗೆ ಮಾತ್ರ ಪ್ರಾಮುಖ್ಯತೆ ನೀಡಲಾಗುತ್ತಿತ್ತು. ಇತ್ತೀಚೆಗೆ ಕಬ್ಬಿನಿಂದ ಎಥೆನಾಲ್ ಉತ್ಪಾದನೆ ಹೆಚ್ಚಾಗುತ್ತಿದೆ. ಕಬ್ಬಿನ ಕಸದಿಂದ ಸುಟ್ಟು ಬರುವ ಕಚ್ಚಾ ವಸ್ತುಗಳಿಂದ ವಿದ್ಯುತ್ ಉತ್ಪಾದನೆ ಆಗುತ್ತಿದೆ. ಸಕ್ಕರೆ ಕಾರ್ಖಾನೆಗಳಿಂದ ಜೈವಿಕ ಇಂಧನ ಅಧಿಕ ಉತ್ಪಾದನೆ ಆಗುತ್ತಿರುವುದು ಇಂಧನ ವಲಯಕ್ಕೆ ಶಕ್ತಿ ತುಂಬಿದೆ ಎಂದರು.

> ನವೀಕರಿಸಬಹುದಾದ ಶಕ್ತಿ ಮೂಲಗಳಾದ ಸೋಲಾರ್, ವಿಂಡ್ ಎನರ್ಜಿ ಕ್ಷೇತ್ರದಲ್ಲಿ ರಾಜ್ಯವು ಉತ್ತಮ ಸಾಧನೆ ಮಾಡಲು ಈಗಾಗಲೇ ಹಲವಾರು ಕಾರ್ಯಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಿದೆ. ಪ್ರಸ್ತುತ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಗೂ ಸರ್ಕಾರ ಆಸಕ್ತಿ ತೋರಿದೆ. ನೂತನ ಜೈವಿಕ ಇಂಧನ ನೀತಿಯು ಈ ಕ್ಷೇತ್ರದ ಅಭಿವೃದ್ಧಿಗೆ ವೇಗವರ್ಧಕವಾಗಲಿದೆ.
>
> **– ಎಸ್.ಈ. ಸುಧೀಂದ್ರ.**
> **ಕರ್ನಾಟಕ ಜೈವಿಕ ಮಂಡಳಿ ಅಧ್ಯಕ್ಷರು.**

ಜೈವಿಕ ಇಂಧನ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ ಮಾತನಾಡಿ, ಶುಚಿತ್ವಕ್ಕೆ ಮೊದಲ ಆದ್ಯತೆ ನೀಡಬೇಕು. ಮುಂದಿನ 30 ವರ್ಷಗಳಲ್ಲಿ ಭಾರತ ಬಲಿಷ್ಠ ರಾಷ್ಟ್ರವಾಗಲಿದೆ. ಇಂದಿನ ವಿದ್ಯಾರ್ಥಿಗಳು ಸಂಪನ್ಮೂಲಗಳ ಸಮರ್ಪಕ ಬಳಕೆಗೆ ಒತ್ತು ನೀಡಬೇಕು. ಬದುಕಿಗೆ ಆಹಾರ, ವಸತಿ, ಶಿಕ್ಷಣ ಎಷ್ಟು ಮುಖ್ಯವೋ ಶಕ್ತಿಯು ಅಷ್ಟೇ ಮುಖ್ಯವಾಗಿದೆ. ಜೈವಿಕ ಪುನರ್ಬಳಕೆ ಇಂಧನವು ಭವಿಷ್ಯದಲ್ಲಿ ಅನಿವಾರ್ಯತೆಯಾಗಲಿದೆ ಎಂದು ಹೇಳಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಾ.ಸುರೇಶ್ ವಿ.ನಾಡಗೌಡ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿದ್ಯಾಲಯದ ವಿತ್ತಾಧಿಕಾರಿ ಪ್ರಶಾಂತ್ ಜೆ.ಸಿ, ಜೈವಿಕ ಇಂಧನ ಸಂಶೋಧನೆ ಮಾಹಿತಿ ಹಾಗೂ ಪ್ರಾತ್ಯಕ್ಷಿಕೆ ಕೇಂದ್ರದ ಸಂಯೋಜಕ ಡಾ. ರವಿ ಜಡೆ, ಸಹಾಯಕ ನಿರ್ದೇಶಕ ಗಿರೀಶ್ ದಿಕ್ಷಿತ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ.ನಾಗಣ್ಣಗೌಡ ಅವರು ಆಗಸ್ಟ್ 21ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಆಗಸ್ಟ್ 21ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ನಂತರ ಮಧ್ಯಾಹ್ನ 2.30ರಿಂದ 5.30ರವರೆಗೆ ಪ್ರಗತಿ ಪರಶೀಲನಾ ಸಭೆ ಜರುಗಿಸುವರು.

ಪ್ರವಾಸದ ಸಂದರ್ಭದಲ್ಲಿ ಅಧ್ಯಕ್ಷರೊಂದಿಗೆ ಆಯೋಗದ ಸದಸ್ಯರುಗಳಾದ ಶೇಖರಗೌಡ ರಾಮತ್ನಾಳ, ಶಶಿಧರ್ ಕೋಸಂಬೆ, ಡಾ. ತಿಪ್ಪೇಸ್ವಾಮಿ ಕೆಟಿ, ಶ್ರೀಮತಿ ಎಸ್.ಮಂಜು, ವೆಂಕಟೇಶ್ ಹಾಗೂ ಅಪರ್ಣಾ ಎಂ.ಕೊಳ್ಳಾ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

### ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಜಯಂತಿ ಕಾರ್ಯಕ್ರಮದಲ್ಲಿ ಡಿಸಿ ದಿವ್ಯ ಪ್ರಭು

# ದೇವರಾಜ ಅರಸು ಸಾಮಾಜಿಕ ನ್ಯಾಯದ ಹರಿಕಾರ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯಕ್ಕೆ ನಾಮಕರಣ ಸೇರಿದಂತೆ ಅನೇಕ ಮಹತ್ವದ ಘಟ್ಟಗಳನ್ನು ನಿರ್ಮಿಸಿದ ಕೀರ್ತಿ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರಿಗೆ ಸಲ್ಲುತ್ತದೆ. ಸಾಮಾಜಿಕ ತಾರತಮ್ಯಗಳನ್ನು ನಿವಾರಿಸಿ, ಸಮಾಜದ ಸರ್ವರಿಗೂ ನ್ಯಾಯ, ಅವಕಾಶಗಳಲ್ಲಿ ಸಮಾನತೆಯನ್ನು ತರಲು ನಿರಂತರವಾಗಿ ಶ್ರಮಿಸಿದ ಸಾಮಾಜಿಕ ನ್ಯಾಯದ ಹರಿಕಾರರಾಗಿ ದೇವರಾಜ ಅರಸು ಅವರು ಇತಿಹಾಸದಲ್ಲಿ ದಾಖಲಾಗಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಬೆಳಿಗ್ಗೆ ನಗರದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಸಹಯೋಗದಲ್ಲಿ ಕರ್ನಾಟಕದ ಮಾಜಿ ಮುಖ್ಯಮಂತ್ರಿ, ಸಾಮಾಜಿಕ ನ್ಯಾಯದ ಹರಿಕಾರ ಡಿ. ದೇವರಾಜ ಅರಸು ಅವರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ರಾಜ್ಯದ ಹಿಂದುಳಿದ ವರ್ಗಗಳಿಗೆ ನ್ಯಾಯಯುತವಾದ ಅವಕಾಶಗಳು ಮತ್ತು ಸೌಲಭ್ಯಗಳು ದೊರೆಯಲು ಡಿ.ದೇವರಾಜ ಅರಸು ಅವರ ಕೊಡುಗೆ ಮುಖ್ಯವಾಗಿದೆ. ಅವರ ಆಡಳಿತ ಅವಧಿಯಲ್ಲಿ ಆಯೋಗಗಳ ರಚನೆ,



ಕರ್ನಾಟಕ ನಾಮಕರಣ ಸೇರಿದಂತೆ ಅನೇಕ ಮಹತ್ವದ ಕಾರ್ಯಗಳಾಗಿವೆ. ಇಂದಿನ ವ್ಯವಸ್ಥೆಯ ಬದಲಾವಣೆಗೆ ಅವರ ಚಿಂತನೆಗಳು, ಸುಧಾರಣೆಗಳು ಮತ್ತು ಆಡಳಿತಾತ್ಮಕ ಕ್ರಮಗಳು ಅಗತ್ಯವಾಗಿವೆ. ಡಿ. ದೇವರಾಜ ಅರಸು ಅವರು ಹುಟ್ಟಿ 110 ವರ್ಷ ಆದರೂ ಅವರನ್ನು ನಾವು ನೆನಪಿಸುತ್ತೇವೆ. ಇದಕ್ಕೆ ಕಾರಣ ಅವರು ಸಮಾಜಕ್ಕೆ ನೀಡಿದ ಕೊಡುಗೆಗಳಾಗಿವೆ ಎಂದರು.

ಪ್ರೊ. ಶಶಿಧರ ತೊಡಕರ ಹಾಗೂ ಪಾಲಿಕೆಯ ಮಾಜಿ ಮಹಾಪೌರ ಹಾಗೂ ಹಾಲಿ ಸದಸ್ಯ ವಿರೇಶ ಅಂಚಟಗೇರಿ ಅವರು ಡಿ. ದೇವರಾಜ ಅರಸು ಅವರ ಕುರಿತು ಮಾತನಾಡಿದರು.

ಗೋಟಗೋಡಿ ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನದ ಮುಖ್ಯಸ್ಥ ಡಾ. ವೆಂಕನಗೌಡ ಪಾಟೀಲ ಅವರು ಸಾಮಾಜಿಕ ನ್ಯಾಯದ ಹರಿಕಾರ ಡಿ. ದೇವರಾಜ ಅರಸು ಅವರ ಜೀವನ ಚರಿತ್ರೆ ಕುರಿತು ವಿಶೇಷ ಉಪನ್ಯಾಸ ನೀಡಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಭಾನುಮತಿ ಎಚ್ ಪ್ರಾಸ್ತಾವಿಕವಾಗಿ ಮಾತನಾಡಿದರು. ರವಿ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು.

> ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಮಾತನಾಡಿ, ಕರ್ನಾಟಕದಲ್ಲಿ ಸಾಮಾಜಿಕ ನ್ಯಾಯದ ಚಿಂತನೆಗೆ ಬುನಾದಿ ಹಾಕಿದವರು ಡಿ. ದೇವರಾಜ ಅರಸು ಅವರು. ಅವರ ಕಾಲದಲ್ಲಿ ಜಾರಿಗೆ ತಂದ ವಿವಿಧ ಕಲ್ಯಾಣ ಯೋಜನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ, ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮಾಜದ ರಾಜ್ಯಾಧ್ಯಕ್ಷ ಶಿವಾನಂದ ಪಾಟೀಲ, ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮಾಜದ ಸದಸ್ಯ ಗುರುನಾಥ ಹುಲ್ಲೂರ, ಜಿಲ್ಲಾಧ್ಯಕ್ಷ ಪರಶುರಾಮ ಚುರುಮುರಿ, ಉಪಾಧ್ಯಕ್ಷ ರಾಜು, ಗ್ರಾ.ಪಂ ಅಧ್ಯಕ್ಷ ಭೀಮಪ್ಪ, ಕರ್ನಾಟಕ ರಾಜ್ಯ ಹಿಂದುಳಿದ ಅಲೆಮಾರಿ ಸಮಾಜದ ಉಪಾಧ್ಯಕ್ಷ ಪ್ರಕಾಶ ಬಿಲಾನಾ, ಪಾಲಿಕೆಯ ಮಾಜಿ ಸದಸ್ಯ ಆನಂದ ಸಿಂಗನಾಥ, ಸಮಾಜದ ಮುಖಂಡ ವಸಂತ ಅರ್ಕಾಚಾರಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

## ಪಿಒಪಿ ಗಣೇಶ ಮೂರ್ತಿಗಳ ಪರಿಶೀಲನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಮಾರುಕಟ್ಟೆ, ಗಣೇಶ ವಿಗ್ರಹ ಮಾರುವ ವಿವಿಧ ಮಳಿಗೆಗಳಿಗೆ ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಬುಧವಾರ ಭೇಟಿ ನೀಡಿ ಮಾರಾಟಕ್ಕಿಟ್ಟಿರುವ ಗಣೇಶ ಮೂರ್ತಿಗಳನ್ನು ಪರಿಶೀಲಿಸಿದರು.

ಪಿಒಪಿ(ಪ್ಲಾಸ್ಟರ್ ಆಫ್ ಪ್ಯಾರಿಸ್) ಗಣೇಶ ವಿಗ್ರಹ ತಯಾರಿಸಿ ಮಾರಾಟ ಮಾಡುವುದರಿಂದ ಪ್ರಕೃತಿಗೆ ಅತೀವ ನಷ್ಟವುಂಟಾಗಲಿದ್ದು, ವಿಸರ್ಜನೆ ಮಾಡಿದಾಗ ನೀರು ಕಲುಷಿತಗೊಳ್ಳುವುದಲ್ಲದೆ ಮಾರಣಾಂತಿಕ ಕಾಯಿಲೆಗಳಿಗೆ ಕಾರಣವಾಗುತ್ತದೆ.

ವ್ಯಾಪಾರಸ್ಥರು ಯಾವುದೇ ಕಾರಣಕ್ಕೂ ಪ್ಲಾಸ್ಟರ್ ಆಫ್ ಪ್ಯಾರಿಸ್ ಗಣೇಶ ವಿಗ್ರಹಗಳನ್ನು ಮಾರಾಟ ಮಾಡಬಾರದು.

ಒಂದು ವೇಳೆ ಅಂತಹ ಮೂರ್ತಿ ತಯಾರಿಕೆ ಹಾಗೂ ಮಾರಾಟ ಕಂಡುಬಂದಲ್ಲಿ ಜಲ ಮಾಲಿನ್ಯ ತಡೆ ಮತ್ತು ಪ.ಪಂ ಕಾಯ್ದೆ ಅನ್ವಯ ಅಗತ್ಯ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮಹೇಶ ನಿಡಶೇಶಿ ಎಚ್ಚರಿಸಿದರು.

ಈವೇಳೆ ಆರೋಗ್ಯ ನಿರೀಕ್ಷಕ ರಕ್ಷತ ಎಲ್ ಸೇರಿದಂತೆ ಪ.ಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಗಿನ್ನೆಸ್ ದಾಖಲೆಯ ಗುರಿಯೊಂದಿಗೆ ಆ.22ರಿಂದ ಬೃಹತ್ ರಕ್ತದಾನ ಅಭಿಯಾನ

# ನಾಲ್ಕು ದಿನಗಳ ರಕ್ತದಾನ ಶಿಬಿರ ನಾಳೆಯಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ಗಿನ್ನೆಸ್ ವಿಶ್ವದಾಖಲೆ ಸ್ಥಾಪಿಸುವ ಮಹತ್ತರ ಗುರಿಯೊಂದಿಗೆ ಈಶ್ವರೀಯ ವಿಶ್ವವಿದ್ಯಾಲಯವು ದೇಶಾದ್ಯಂತ ಬೃಹತ್ ರಕ್ತದಾನ ಅಭಿಯಾನವನ್ನು ಹಮ್ಮಿಕೊಂಡಿದ್ದು, ಗದಗ-ಬೆಟಗೇರಿಯಲ್ಲೂ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಬ್ರಹ್ಮಕುಮಾರಿ ಜಯಂತಿ ಅಕ್ಕನವರು ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಬೃಹತ್ ಅಭಿಯಾನದ ಮೂಲಕ ಭಾರತ ಮತ್ತು ನೇಪಾಳದಾದ್ಯಂತ ಕೇವಲ 100 ಗಂಟೆಗಳಲ್ಲಿ 1 ಲಕ್ಷಕ್ಕೂ ಅಧಿಕ ಯೂನಿಟ್ ರಕ್ತ ಸಂಗ್ರಹಿಸುವ ಗುರಿಯನ್ನು ಹೊಂದಲಾಗಿದೆ. ಈ ಸಾಧನೆಯು ಗಿನ್ನೆಸ್ ವಿಶ್ವ ದಾಖಲೆಯಾಗಿ ಹೊರಹೊಮ್ಮುವ ವಿಶ್ವಾಸವಿದೆ ಎಂದರು.




ಅಭಿಯಾನದ ಭಾಗವಾಗಿ ಗದಗ ಜಿಲ್ಲೆಯ ವಿವಿಧೆಡೆ ನಾಲ್ಕು ದಿನಗಳ ಕಾಲ ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗಿದೆ. ಆ. 22ರಂದು ಬೆಳಿಗ್ಗೆ 10ರಿಂದ ಸಂಜೆ 4 ಗಂಟೆಯವರೆಗೆ ಸಿದ್ಧರಾಮೇಶ್ವರ ನಗರದಲ್ಲಿರುವ ಆಧ್ಯಾತ್ಮಿಕ ಸಂಸ್ಕೃತಿ ಭವನದಲ್ಲಿ ರಕ್ತದಾನ ಶಿಬಿರ ನಡೆಯಲಿದೆ. ಆ. 23ರಂದು ಹುಲಕೋಟಿಯ ಬ್ರಹ್ಮಕುಮಾರಿ ಸಭಾಂಗಣದಲ್ಲಿ, ಆ. 24ರಂದು ಗಜೇಂದ್ರಗಡ ತಾಲೂಕಿನ ನರೇಗಲ್‌ನ ಬ್ರಹ್ಮಾಕುಮಾರಿ ಸಭಾಂಗಣದಲ್ಲಿ, ಆ. 25ರಂದು ಬೆಟಗೇರಿಯ ಬ್ರಹ್ಮಾಕುಮಾರಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಮಾಹಿತಿ ನೀಡಿದರು.

> ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಆಗಸ್ಟ್ 22ರಂದು ಬೆಳಿಗ್ಗೆ 10 ಗಂಟೆಗೆ ಗದಗ ನಗರದ ಬ್ರಹ್ಮಾಕುಮಾರಿಸ್ ಸಭಾಂಗಣದಲ್ಲಿ ನಡೆಯಲಿದ್ದು, ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ್ ಬೊಮ್ಮನಹಳ್ಳಿ ಹಾಗೂ ವೈದ್ಯಾಧಿಕಾರಿ ಡಾ. ಗಿರೀಶ್ ನಾಗರಾಳ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ರಕ್ತದಾನ ಮಾಡಲು ಹೆಸರು ನೋಂದಾಯಿಸುವುದು ಕಡ್ಡಾಯವಾಗಿದ್ದು, ಆಸಕ್ತರು-6360753992 ಸಂಖ್ಯೆಗೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಬ್ರಹ್ಮಕುಮಾರಿ ಜಯಂತಿ ಅಕ್ಕನವರು ತಿಳಿಸಿದರು.

ಈ ಅಭಿಯಾನವು ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ರೆಡ್ ಕ್ರಾಸ್ ಸೊಸೈಟಿ, ವಿವಿಧ ಸರ್ಕಾರಿ ಆಸ್ಪತ್ರೆಗಳು, ವೈದ್ಯಕೀಯ ಕಾಲೇಜುಗಳು, ರೋಟರಿ ಕ್ಲಬ್, ಲಯನ್ಸ್ ಕ್ಲಬ್ ಸೇರಿದಂತೆ ಹಲವಾರು ಸಂಸ್ಥೆಗಳ ಸಹಯೋಗದೊಂದಿಗೆ ನಡೆಯುತ್ತಿದೆ. ಗದಗದಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಬೋಧಕ ಆಸ್ಪತ್ರೆಯ ಸಹಯೋಗವಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿ.ಕೆ. ರೇಖಾ, ಬಿ.ಕೆ. ಉಮಾದೇವಿ, ಬಿ.ಕೆ. ಸವಿತಾ, ಬಿ.ಕೆ. ಸಾವಿತ್ರಿ ಉಪಸ್ಥಿತರಿದ್ದರು.

# ವಿಕಲಚೇತನ ಮಕ್ಕಳೊಂದಿಗೆ ಮಾಜಿ ಸಚಿವ ಬಂಡಿ ಜನ್ಮದಿನ ಆಚರಿಸಿದ ಅಭಿಮಾನಿಗಳು!




■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ರೋಣ ಮತ ಕ್ಷೇತ್ರದ ಮಾಜಿ ಸಚಿವ ಕಳಕಪ್ಪ ಬಂಡಿ ಅವರ 57 ನೇ ಹುಟ್ಟು ಹಬ್ಬವನ್ನು ನಗರದ ಸೇವಾ ಭಾರತಿ ಅರುಣೋದಯ ವಿಶೇಷ ಅಗತ್ಯವುಳ್ಳ ಶಾಲೆಯಲ್ಲಿ ವಿಕಲ ಚೇತನ ಮಕ್ಕಳೊಂದಿಗೆ ಸಿಹಿ ಹಂಚುವ ಮೂಲಕ ಮಾಜಿ ಆಚರಿಸಲಾಯಿತು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿದ್ದಣ್ಣ ಪಲ್ಲೇದ ಮಾತನಾಡಿ, ಕಳಕಪ್ಪ ಬಂಡಿಯವರು ರೋಣ ಕ್ಷೇತ್ರದಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ್ದು, ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಬೇಕು ಎಂಬುದು ಕಳಕಪ್ಪ ಬಂಡಿ ಅವರ ಕನಸಾಗಿತ್ತು. ಈ ನಿಟ್ಟಿನಲ್ಲಿ ರೋಣ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಥಮ ಬಾರಿಗೆ ಡಿಜಿಟಲ್ ಕ್ಲಾಸ್ ರೂಂ ಉದ್ಘಾಟನೆ ಮಾಡುವ ಮೂಲಕ ಶೈಕ್ಷಣಿಕ ಪ್ರಗತಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದ ಪಲ್ಲೇದ, ಬಂಡಿ ಅವರ 57 ನೇ ಹುಟ್ಟು ಹಬ್ಬವನ್ನು ವಿಕಲ ಚೇತನ ಮಕ್ಕಳೊಂದಿಗೆ ಆಚರಿಸುತ್ತಿರುವುದು ನಮಗೆ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಂದಶೇಖರ ಬಾಗಲಕೋಟೆ, ಎಮ್ ಜಿ ಹೂಗಾರ, ಲುಕ್ಕಣಸಾ ರಾಜೋಳಿ, ಶಂಕರ್ ಬದಿ, ಸಂತೋಷ ಪಾಟೀಲ್, ಆಕಾಶ ಪಾಟೀಲ್, ಎಮ್ ವಿ ಅಕ್ಕಿ (ಶಿಕ್ಷಕರು), ಜೀತೇಂದ್ರ ಷಾ, ಪಂಚಾಕ್ಷರಿ ಅಂಗಡಿ, ಬಸವರಾಜ್, ಸಂಜೀವ ಕಬಾಡಿ, ಮೋಹನ ವರವಿ ಸೇರಿದಂತೆ ಹಲವರು ಹಾಜರಿದ್ದರು.

> ಜಿಲ್ಲೆಯಲ್ಲಿ ಅತಿ ಹಿಂದುಳಿದ ತಾಲೂಕುಗಳಾದ ಗಜೇಂದ್ರಗಡ, ಮುಂಡರಗಿ, ರೋಣ ಪಟ್ಟಣದ ಅಭಿವೃದ್ಧಿಗೆ ಮಾಜಿ ಸಚಿವ ಕಳಕಪ್ಪ ಬಂಡಿ ಅವರ ಕೊಡುಗೆ ಅಪಾರವಾಗಿದ್ದು, ಅವರ 57 ನೇ ಹುಟ್ಟು ಹಬ್ಬದ ಸಂದರ್ಭದಲ್ಲಿ ಈ ದಿನ ವಿಶೇಷ ಕಾರ್ಯಕ್ರಮಗಳನ್ನು ಅಭಿಮಾನಿಗಳೊಂದಿಗೆ ಹಮ್ಮಿಕೊಂಡಿದ್ದು, ಕಳಕಪ್ಪ ಬಂಡಿ ಅವರ ಕಾರ್ಯ ಸಮಾಜಮುಖಿ ಸೇವೆಗೆ ಹಿಡಿದ ಕೈಗನ್ನಡಿಯಾಗಿದೆ.
>
> **-ವಸಂತ ಪಡಗದ,**
> **ಬಿಜೆಪಿ ಯುವ ಮುಖಂಡರು, ಗದಗ**

**ಮಳೆಯ ಆರ್ಭಟಕ್ಕೆ ಜನಜೀವನ ಅಸ್ತವ್ಯಸ್ತ । ಬೆಳೆ ನೀರುಪಾಲು, ಸಂಚಾರ ದುಸ್ತರ**

# ಜಿಲ್ಲಾಡಳಿತಕ್ಕೆ ಎದುರಾದ ತುರ್ತು ಸವಾಲು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಒಂದು ತಿಂಗಳಿಂದ ಸುರಿಯುತ್ತಿರುವ ಅತಿವೃಷ್ಟಿಯಿಂದ ರಸ್ತೆ, ಮನೆ, ವ್ಯಾಪಾರ ಹಾಗೂ ಕೃಷಿ ಚಟುವಟಿಕೆಗಳ ಮೇಲೆ ಪರಿಣಾಮ ಬೀರಿದೆ. ಜನತೆ ಚಿಂತೆಯಲ್ಲಿದ್ದು, ಜಿಲ್ಲಾ ಆಡಳಿತಕ್ಕೆ ತುರ್ತು ಸವಾಲು ಎದುರಾಗಿದೆ. ಹೋಬಳಿ ವ್ಯಾಪ್ತಿಯಲ್ಲಿ ನಿರಂತರ ಸುರಿಯುತ್ತಿರುವ ಮಳೆಯಿಂದ ಸಾಮಾನ್ಯ ಜನ ಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ರಸ್ತೆಗಳು ಕೆಸರುಮಯವಾಗಿದ್ದು, ವಾಹನ ಸಂಚಾರಕ್ಕೆ





ದೊಡ್ಡ ಸವಾಲು ಎದುರಾಗಿದೆ. ಅನೇಕ ಪ್ರದೇಶಗಳಲ್ಲಿ ಚರಂಡಿ ನೀರು ತುಂಬಿ ಮನೆಗಳೊಳಗೆ ನುಗ್ಗಿದೆ. ಹಳೆ ಮನೆಗಳ ಮೇಲ್ಛಾವಣಿ ಹಾಗೂ ಮಣ್ಣಿನ ಗೋಡೆಗಳು ಕುಸಿದು ಬೀಳಲು ಆರಂಭಿಸಿವೆ.

ಗ್ರಾಮೀಣ ಭಾಗದಲ್ಲಿ ಹೊಲಗಳು ಜಲಾವೃತಗೊಂಡಿದ್ದು, ಕೃಷಿಕರು ಬೆಳೆ ಹಾನಿಯ ಆತಂಕದಲ್ಲಿ ತತ್ತರಿಸುತ್ತಿದ್ದಾರೆ. ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆಗಳು ಜಲಾವೃತಗೊಂಡಿದ್ದು, ವಾಹನಗಳು ಮಧ್ಯದಲ್ಲೇ ನಿಂತು ಸವಾರರು ಪರದಾಡುವ ಪ್ರಸಂಗ ಹಲವಡೆ ನಿರ್ಮಾಣವಾಗಿದೆ.

ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದ ಪ್ರಮುಖ ರಸ್ತೆಗಳು ನೀರಿನಲ್ಲಿ ಮುಳುಗಿದ್ದು, ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಬಸ್ಸು, ಆಟೋ, ಬೈಕ್, ಕಾರು ಎಲ್ಲವೂ ಜಲಾವೃತ ರಸ್ತೆಗಳ ಮಧ್ಯೆ ನಿಲ್ಲುವಂತಾಗಿ ಟ್ರಾಫಿಕ್ ಜಾಮ್ ಉಂಟಾಗಿದೆ. ಶಾಲೆಗೆ ಹೋಗುವ ಮಕ್ಕಳಿಂದ ಹಿಡಿದು, ಕಚೇರಿ ಕಾರ್ಮಿಕರ ತನಕ ಎಲ್ಲರೂ ಮಳೆ ಕಾಟದಿಂದ ನರಳುತ್ತಿದ್ದಾರೆ.

ಕಡಿಮೆ ಎತ್ತರದ ಪ್ರದೇಶಗಳಲ್ಲಿ ಮನೆಗಳಿಗೆ ಮಳೆನೀರು ನುಗ್ಗಿದ್ದು, ಜನರು ಮನೆ ಬಿಟ್ಟು ಹೊರಗಡೆ ಆಶ್ರಯ ಪಡೆಯುವ ಪರಿಸ್ಥಿತಿ ಎದುರಾಗಿದೆ. ಅನೇಕರು ತಮ್ಮ ಮನೆಯ ನಿತ್ಯಬಳಕೆಯ ಸಾಮಗ್ರಿಗಳನ್ನು ಕಳೆದುಕೊಂಡಿದ್ದು, ಮನೆಯ ಒಳಾಂಗಣದಲ್ಲೇ ದೋಣಿ ಹಾಯುವಂತಾಗಿದೆ.

ಗ್ರಾಮೀಣ ಭಾಗಗಳಲ್ಲಿ ಹೊಲಗಳು ಜಲಾವೃತಗೊಂಡಿದ್ದು, ಬೆಳೆ ಹಾನಿ ಭಾರೀ ಪ್ರಮಾಣದಲ್ಲಿ ಸಂಭವಿಸಿದೆ. ಬಿತ್ತನೆ ಮಾಡಿದ್ದ ಹೆಸರು, ಈರುಳ್ಳಿ, ಮೆಕ್ಕೆಜೋಳ ಮುಂತಾದ ಬೆಳೆಗಳು ನೀರಿನಲ್ಲಿ ಮುಳುಗಿದ್ದು, ರೈತರ ಆತಂಕ ಹೆಚ್ಚಿಸಿದೆ. ಮಳೆ ನೀರಿನಲ್ಲಿ ಕೊಳೆಗೇರಿದ ಕಸ ಹಾಗೂ ಚರಂಡಿ ಮಿಶ್ರಣದಿಂದ ಡೆಂಗ್ಯೂ, ಮಲೇರಿಯಾ, ಚರ್ಮರೋಗ ಹರಡುವ ಭೀತಿ ವ್ಯಕ್ತವಾಗಿದೆ. ಆರೋಗ್ಯ ಇಲಾಖೆ ತುರ್ತು ಕ್ರಮಗಳನ್ನು ಕೈಗೊಂಡಿದ್ದು, ಜನರಿಗೆ ಎಚ್ಚರಿಕೆ ನೀಡಲಾಗಿದೆ.

> ಮಳೆ ಬಂದ ತಕ್ಷಣವೇ ರಸ್ತೆಗಳು ಜಲಾವೃತವಾಗುವುದು, ಗುಂಡಿಗಳಾಗುವುದು ಅಚ್ಚರಿಯ ಸಂಗತಿಯಲ್ಲ. ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ರಸ್ತೆಗಳಿಗೆ ಮಳೆಯ ಮೊದಲ ಹನಿ ಬಿದ್ದರೆ ಸಾಕು, ಡಾಂಬರು ಬಿರುಕು ಬಿಟ್ಟುಹೋಗುತ್ತಿದೆ. ಇದು ಗುತ್ತಿಗೆದಾರರ ನಿರ್ಲಕ್ಷ್ಯವೋ ಅಥವಾ ಗುಣಮಟ್ಟ ಪರಿಶೀಲನೆ ನಡೆಸದ ಅಧಿಕಾರಿಗಳ ನಿರ್ಲಕ್ಷ್ಯವೋ ಎಂಬ ಪ್ರಶ್ನೆಗಳು ಉದ್ಭವಿಸಿವೆ.

# ಮಹಾ ಅನ್ನ ಸಂತರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೇ ಸರಾಫ ಬಜಾರ ಕರುಗಲ್ ಓಣಿಯಲ್ಲಿರುವ ಶ್ರೀ ಶಿರಡಿ ಸಾಯಿಬಾಬಾ ದೇವಸ್ಥಾನದಲ್ಲಿ ಆಗಸ್ಟ್ 21ರಂದು ಮುಂಜಾನೆ ಸಾಯಿಬಾಬಾ ರ್ವ ರ ಮಂಗಲಸ್ನಾನ, ಮಧ್ಯಾಹ್ನ 12ಕ್ಕೆ ಮಹಾಮಂಗಳಾರತಿ, ಶ್ರೀಸಾಯಿ ಸೇವಾ ಸಮಿತಿ ವತಿಯಿಂದ ಮಧ್ಯಾಹ್ನ 1.30ಕ್ಕೆ ಮಹಾ ಅನ್ನ ಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶ್ರೀ ಶಿರಡಿ ಸಾಯಿಬಾಬಾ ಸದ್ಭಕ್ತರು ಪಾಲ್ಗೊಂಡು ಶ್ರೀ ಶಿರಡಿ ಸಾಯಿಬಾಬಾ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟಣೆ ಕೋರಿದೆ.

# ಬಿಜೆಪಿ ಮಹಿಳಾ ಮೋರ್ಚಾದಿಂದ ಉಡಿ ತುಂಬುವ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶಹಪೂರಪೇಟೆಯಲ್ಲಿ ಭಾರತೀಯ ಜನತಾ ಪಾರ್ಟಿ ಗದಗ ನಗರ ಮಂಡಲ ಮಹಿಳಾ ಮೋರ್ಚಾ ವತಿಯಿಂದ ಉಡಿ ತುಂಬುವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಯಲಕ್ಷ್ಮೀ ಮಾನ್ವಿ ಮಾತನಾಡಿ, ನಮ್ಮ ಹಿಂದೂ ಸಂಸ್ಕೃತಿಯನ್ನು ಪಾಲಿಸಿ ಮುಂದಿನ ಪೀಳಿಗೆಗೆ ತೋರಿಸಿಕೊಡುವಲ್ಲಿ ಮಹಿಳೆಯರ ಪಾತ್ರ ದೊಡ್ಡದು. ಆ ಎಲ್ಲ ಮಹಿಳೆಯರಿಗೆ ಒಳ್ಳೆಯದಾಗಲಿ ಎಂದು ಪ್ರಾರ್ಥಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಾರ್ಡಿನ ನಗರಸಭಾ ಸದಸ್ಯರಾದ ಚಂದ್ರು ತಡಸದ, ಮಹಿಳಾ ಮೋರ್ಚಾ ಗದಗ ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಕವಿತಾ ಬಂಗಾರಿ, ಪದ್ಮಿನಿ ಮುತ್ತಲದಿನ್ನಿ, ಶೇಖವ್ವ ಮಾಸರೆಡ್ಡಿ, ಸುಮಂಗಲಾ ಕೊನೆವಾಲ, ಜಯಶ್ರೀ ಅಣ್ಣಿಗೇರಿ, ಶೋಭಾ ಗುಗ್ಗರಿ, ಸುಜಾತಾ ಕಾಡಪ್ಪನವರ, ಶೈಲಾ ಕೋಡೆಕಲ್, ಸಾಗರಿಕಾ ಅಕ್ಕಿ, ಅಕ್ಷತಾ ಉಮಚಗಿ, ಅಶ್ವಿನಿ ಮಾಳೆಕೊಪ್ಪಮಠ, ಶೃತಿ ಯಳಮಲಿ, ಪೂಜಾ ಬೂಮಾ, ರಾಜೇಶ್ವರಿ ಪಟ್ಟಣಶೆಟ್ಟಿ, ರೋಹಿಣಿ ಬೊಮ್ಮನಳ್ಳಿ, ಭಾಗ್ಯಶ್ರೀ ಕುರಡಗಿ, ಲಲಿತಾ ತಡಸದ್, ಮಂಜುಳಾ ಡಂಬಳ, ಸುಧಾ ಕೆರೂರ, ಲಕ್ಷ್ಮೀ ಗುರಿಕಾರ, ವಿಜಯಲಕ್ಷ್ಮೀ ಕುಬಸದ, ಶೋಭಾ ಬೆಂಗಳೂರ, ಮಾನಂದಾ ಯೆಂಡಿಗೆರಿ, ರತ್ನಕ್ಕ ಕಲ್ಲೂರ, ತಿಪ್ಪವ್ವ ಖಾನಾಪೂರ, ಸುಜಾತಾ ಮಾನ್ವಿ, ತೋಟಮ್ಮ ಹಂಪಣ್ಣನವರ, ದೀಪಾ ಇಟಗಿ, ಸೀಮಾ ಶೆಟ್ಟರ, ಜ್ಯೋತಿ ಬಾಳಿಗೇರಿ, ರೇಣುಕಾ ಬಾಗಲಿ, ಮಂಜುಳಾ ಕುಬಸದ, ಮಂಗಳಾ ಗಡಾದ, ಸುವರ್ಣ ಭೂಸನೂರಮಠ, ವಿಜಯಲಕ್ಷ್ಮೀ ಭೂಸನೂರಮಠ, ಲಕ್ಷ್ಮೀ ಇಟಗಿ, ಲತಾ ಮಾನೆ, ಜ್ಯೋತಿ ಹೆರಲಗಿ, ಅಮಿತಾ ಮುತ್ತಲದಿನ್ನಿ, ಅಕ್ಷತಾ ಕುಲಕರ್ಣಿ, ಗೀತಾ ಕಮಿತಕರ, ಅನ್ನಪೂರ್ಣ ಮುಧೋಳ, ರಾಜೇಶ್ವರಿ ಕುಬಸದ, ವಿಜಯಲಕ್ಷ್ಮೀ ಕರಿಗೌಡರ, ಕಲಾವತಿ ಹುಣಸಿಮರದ, ಜ್ಯೋತಿ ದೇಸಾಯಿಪಟ್ಟಿ, ಜ್ಯೋತಿ ಹೇರಲಗಿ, ಶೋಭಾ ಪರ್ವತಗೌಡ್ರ ಮುಂತಾದವರಿದ್ದರು.

**ಆ.22ರಿಂದ ಕಾಶೀ ವಿಶ್ವನಾಥ ರಥೋತ್ಸವ, ದುರ್ಗಾದೇವಿಗೆ ಉಡಿ ತುಂಬುವ ಕಾರ್ಯಕ್ರಮ**

# ಸಾಮೂಹಿಕ ವಿವಾಹ, ಧರ್ಮಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕಾಶೀ ವಿಶ್ವನಾಥ ನಗರದ (ಬುಳ್ಳಾ ಪ್ಲಾಟ್) ಶ್ರೀ ಕಾಶೀ ವಿಶ್ವನಾಥ ರಥೋತ್ಸವ ಹಾಗೂ ಜಗನ್ಮಾತೆ ಶ್ರೀ ದುರ್ಗಾದೇವಿಗೆ ಉಡಿ ತುಂಬುವ ಕಾರ್ಯಕ್ರಮ, ಸಾಮೂಹಿಕ ವಿವಾಹ, ಧರ್ಮಸಭೆ, ಮಹಾರಥೋತ್ಸವ, ಸನ್ಮಾನ, ಜಾನಪದ-ರಸಮಂಜರಿ ಕಾರ್ಯಕ್ರಮಗಳು ಆ. 22ರಿಂದ 24ರವರೆಗೆ ಜರುಗಲಿವೆ.

ಆ. 22ರಂದು ಬೆಳಿಗ್ಗೆ 6 ಗಂಟೆಗೆ ಕಾಶೀ ವಿಶ್ವನಾಥನಿಗೆ ಅಭಿಷೇಕ, ದುರ್ಗಾದೇವಿಗೆ ಉಡಿ ತುಂಬುವ ಕಾರ್ಯಕ್ರಮ, ಮಧ್ಯಾಹ್ನ 12 ಗಂಟೆಗೆ 33ನೇ ವರ್ಷದ ಸಾಮೂಹಿಕ ವಿವಾಹ-ಧರ್ಮಸಭೆ ಜರುಗುವದು.

ಗದುಗಿನ ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸುವರು. ಅಧ್ಯಕ್ಷತೆಯನ್ನು ಜಾತ್ರಾ ಸಮಿತಿ ಅಧ್ಯಕ್ಷ ವೆಂಕಟೇಶ



ಪೂಜಾರ ವಹಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಗಣ್ಯರಾದ ಸಿದ್ಧಲಿಂಗಪ್ಪ ಮಾನ್ವಿ, ಎಂ.ಎಸ್. ಕರಿಗೌಡ್ರ, ವಿರೂಪಾಕ್ಷಪ್ಪ ರಾಮಗಿರಿ, ದುಂಡಪ್ಪ ಆಸಂಗಿ ಆಗಮಿಸುವರು.

ಅತಿಥಿಗಳಾಗಿ ಗಣ್ಯರಾದ ಬಿ.ಬಿ. ಅಸೂಟಿ, ಲಲಿತಾ ಅಸೂಟಿ, ಶಾಂತಪ್ಪ ಮುಳವಾಡ, ಬಸನಗೌಡ ಪಾಟೀಲ, ಮಹೇಶ ಸುಂಕದ, ಮಂಜುನಾಥ ಮಡಿವಾಳರ, ರಮೇಶ ಅಣ್ಣಿಗೇರಿ, ದೇವಪ್ಪ ಮಳಗಿ, ಶೇಖಪ್ಪ ಮುಳವಾಡ, ದಾವಲಸಾಬ ರೋಣದ ಆಗಮಿಸುವರು. ಮಧ್ಯಾಹ್ನ 1 ಗಂಟೆಗೆ ಪೂಜ್ಯ ಕಲ್ಲಯ್ಯಜ್ಜನವರು ಮಹಾ ಅನ್ನಸಂತರ್ಪಣೆಗೆ ಚಾಲನೆ ನೀಡುವರು. ಸಂಜೆ 6 ಗಂಟೆಗೆ ಶ್ರೀ ಕಾಶೀ ವಿಶ್ವನಾಥ ರಥೋತ್ಸವ ಜರುಗುವದು.

ಆ. 23ರಂದು ಸಂಜೆ 4 ಗಂಟೆಗೆ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಯುವಕರಿಗೆ ಕ್ರೀಡೆಗಳು, ಸಂಜೆ 7 ಗಂಟೆಗೆ ಸನ್ಮಾನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಾನಪದ, ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಪಾರಿತೋಷಕ ವಿತರಣೆ ಜರುಗುವದು. ಸಾನ್ನಿಧ್ಯವನ್ನು ಭೈರನಹಟ್ಟಿಯ ದೊರೆಸ್ವಾಮಿ ವಿರಕ್ತಮಠದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಜಾತ್ರಾ ಸಮಿತಿಯ ಅಧ್ಯಕ್ಷ ವೆಂಕಟೇಶ ಪೂಜಾರ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಶಾಸಕ ಜಿ.ಎಸ್. ಪಾಟೀಲ, ಜಿಲ್ಲಾಧಿಕಾರಿ ಎಂ.ಎನ್. ಶ್ರೀಧರ, ಗಣ್ಯರಾದ ಪ್ರಭು ಬುರಬುರೆ, ಪರಪ್ಪ ಉಮಚಗಿ, ದುಂಡಪ್ಪ ಆಸಂಗಿ, ಬಿ.ಬಿ. ಅಸೂಟಿ, ಲಲಿತಾ ಅಸೂಟಿ, ಶಾಂತಪ್ಪ ಮುಳವಾಡ, ಜ್ಯೋತಿ ಇರಾಳ, ಬಸನಗೌಡ ಪಾಟೀಲ, ಮಹೇಶ ಸುಂಕದ, ಮಂಜುನಾಥ ಮಡಿವಾಳರ, ಚನ್ನವೀರಪ್ಪ ಮಳಗಿ, ರಮೇಶ ಅಣ್ಣಿಗೇರಿ ಆಗಮಿಸುವರು. ಆರ್.ಎಸ್. ಕಾಶೀಗೌಡ್ರ, ವ್ಹಿ.ಎಸ್. ಅಮರಶೆಟ್ಟಿ ಅವರನ್ನು ಸನ್ಮಾನಿಸಲಾಗುವುದು.

ಮುಖ್ಯ ಅತಿಥಿಗಳಾಗಿ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಶಾಸಕ ಡಿ.ಆರ್. ಪಾಟೀಲ ಆಗಮಿಸುವರು. ಅತಿಥಿಗಳಾಗಿ ಎಸ್‌ಪಿ ರೋಹನ ಜಗದೀಶ, ಪೌರಾಯುಕ್ತ ರಾಜಾರಾಮ ಪವಾರ, ಗಣ್ಯರಾದ ದುಂಡಪ್ಪ ಆಸಂಗಿ, ಶಾಂತಣ್ಣ ಮುಳವಾಡ, ಶರಣಬಸಪ್ಪ ಗುಡಿಮನಿ, ಸಂತೋಷ ಚನ್ನಪ್ಪನವರ, ಬಸವರಾಜ ಬಳ್ಳಾರಿ, ವಿರೂಪಾಕ್ಷಪ್ಪ ರಾಮಗಿರಿ, ಎಂ.ಜಿ. ಸಂತೋಜಿ, ಹರೀಶ ಪೂಜಾರ, ಬಸನಗೌಡ ಪಾಟೀಲ, ಮಹೇಶ ಸುಂಕದ, ಮಂಜುನಾಥ ಮಡಿವಾಳರ ಆಗಮಿಸುವರು ಎಂದು ಚನ್ನವೀರ ಮಳಗಿ, ಶಾಂತಪ್ಪ ಅಕ್ಕಿ ತಿಳಿಸಿದ್ದಾರೆ.

> ಆ. 24ರಂದು ಸಂಜೆ 6 ಗಂಟೆಗೆ ಸನ್ಮಾನ ಹಾಗೂ ರಸಮಂಜರಿ ಕಾರ್ಯಕ್ರಮವಿದ್ದು, ಸಾನ್ನಿಧ್ಯವನ್ನು ನರಗುಂದ ಪಂಚಗ್ರಹ ಗುಡ್ಡದ ಹಿರೇಮಠದ ಪೂಜ್ಯ ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಜಾತ್ರಾ ಸಮಿತಿಯ ಅಧ್ಯಕ್ಷ ವೆಂಕಟೇಶ ಪೂಜಾರ ವಹಿಸುವರು.

# ಲಯನ್ಸ್ ಲೇಡೀಸ್ ಕ್ಲಬ್‌ನಿಂದ 'ರಕ್ಷಾ ಬಂಧನ'



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಲಯನ್ಸ್ ಲೇಡೀಸ್ ಕ್ಲಬ್, ಲಯನ್ಸ್ ಕ್ಲಬ್ ಸಹಕಾರದೊಂದಿಗೆ ಗದುಗಿನ ವೀರೇಶ್ವರ ಪುಣ್ಯಾಶ್ರಮ ಹಾಗೂ ಬೆಟಗೇರಿಯ ಸಿಎಸ್‌ಐ ಬಾಸೆಲ್ ಮಿಷನ್ ಬಾಲಕರ ವಸತಿ ನಿಲಯದಲ್ಲಿ ರಕ್ಷಾ ಬಂಧನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಎರಡೂ ಕ್ಲಬ್‌ನ ಪದಾಧಿಕಾರಿಗಳು ವೀರೇಶ್ವರ ಪುಣ್ಯಾಶ್ರಮದಲ್ಲಿ ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿದ ಬಳಿಕ ಪುಣ್ಯಾಶ್ರಮದ ವಿದ್ಯಾರ್ಥಿಗಳಿಗೆ ರಾಖಿ ಕಟ್ಟಿ ಸಿಹಿ ವಿತರಿಸಿದರು. ನಂತರ ಬೆಟಗೇರಿಯ ಸಿಎಸ್‌ಐ ಬಾಸೆಲ್ ಮಿಷನ್ ಬಾಲಕರ ವಸತಿ ನಿಲಯದ ವಿದ್ಯಾರ್ಥಿಗಳಿಗೆ ರಾಖಿ ಕಟ್ಟಿ ಸಿಹಿ ವಿತರಿಸಿ ಉತ್ತಮ ಅಭ್ಯಾಸದೊಂದಿಗೆ ಉತ್ತಮ ಬದುಕು ರೂಪಿಸಿಕೊಳ್ಳಿ ಎಂದು ಶುಭ ಹಾರೈಸಿದರು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ ಸಂದರ್ಭೋಚಿತವಾಗಿ ಮಾತನಾಡಿದರು.

ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಕೋಶಾಧ್ಯಕ್ಷ ರೇಣುಕಪ್ರಸಾದ ಹಿರೇಮಠ, ಲಯನ್ ಲೇಡೀಸ್ ಕ್ಲಬ್ ಅಧ್ಯಕ್ಷೆ ಪೂಜಾ ಪಾಟೀಲ, ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಕೋಶಾಧ್ಯಕ್ಷೆ ಸ್ನೇಹಾ ಹಿರೇಮಠ, ಡಾ. ಜಗದೀಶ ಶಿರೋಳ, ಅಶ್ವಥ್ ಸುಲಾಖೆ, ಜೆ.ಡಿ. ಉತ್ತರಕರ, ರಮೇಶ ಶಿಗ್ಲಿ, ಪ್ರವೀಣ ವಾರಕರ, ನಿತೀಶ್ ಸಾಲಿ, ಅರವಿಂದ ಪಟೇಲ್, ರಘು ಮೇಹರವಾಡೆ, ಎಸ್.ಡಿ. ಪಾಟೀಲ, ವೀರೇಶ ಪಟ್ಟಣಶೆಟ್ಟಿ, ಮಂಜುನಾಥ ವೀರಲಿಂಗಯ್ಯನಮಠ, ಲಿಂಗರಾಜ ತೋಟದ, ವೀಣಾ ಸುಲಾಖೆ, ಸಾವಿತ್ರಿ ಶಿಗ್ಲಿ ಮುಂತಾದವರು ಪಾಲ್ಗೊಂಡಿದ್ದರು.

# ವರವಿ ಶ್ರೀ ಮೌನೇಶ್ವರರ ಜಾತ್ರಾ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವರವ ಬೇಡಿ ಬರುವ ಭಕ್ತರಿಗೆ ಬೇಡಿದ ವರವ ನೀಡುವ ಶ್ರೀಕ್ಷೇತ್ರ ವರವಿ ಮೌನೇಶ್ವರರು ಕರ್ನಾಟಕ ಸೇರಿದಂತೆ ಹೊರ ರಾಜ್ಯಗಳಲ್ಲಿ ಕೂಡಾ ಅಪಾರ ಸಂಖ್ಯೆಯ ಭಕ್ತರನ್ನು ಹೊಂದಿದ್ದು, ಮೌನೇಶ್ವರರ ಮಹಾ ರಥೋತ್ಸವಕ್ಕೆ ರಾಜ್ಯ ಸೇರಿದಂತೆ ಹೊರ ರಾಜ್ಯದ ಭಕ್ತರು ಆಗಮಿಸಿ ರಥೋತ್ಸವ ಹಾಗೂ ಮಹಾ ಪ್ರಸಾದದಲ್ಲಿ ಪಾಲ್ಗೊಂಡು ಪುನೀತರಾಗುತ್ತರೆ ಎಂದು ಲೇಬಗೇರಿ ಶ್ರೀ ಲಕ್ಷ್ಮೇಂದ್ರ ಸ್ವಾಮಿಗಳ ಮಠದ ಶ್ರೀ ನಾಗಮೂರ್ತೇಂದ್ರ ಮಹಾಸ್ವಾಮಿಗಳು ಹೇಳಿದರು.

ಅವರು ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ವರವಿ ಗ್ರಾಮದ ಶ್ರೀ ಮೌನೇಶ್ವರರ ಜಾತ್ರಾ ಮಹೋತ್ಸವದ ಸಾನ್ನಿಧ್ಯ ವಹಿಸಿ ಜಾತ್ರಾಮಹೋತ್ಸವ ಉದ್ಘಾಟನೆ ಆಶೀರ್ವಚನ ನೀಡಿದರು.

ವರವಿ ಕ್ಷೇತ್ರದ ಶ್ರೀ ಮೌನೇಶ್ವರ ಮಹಾಸ್ವಾಮಿಗಳು, ಶ್ರೀ ವೀರಾಂದ್ರ ಮಹಾಸ್ವಮಿಗಳು, ನವಲಗುಂದ ಶ್ರೀ ನಾಗಲಿಂಗಪ್ಪಜ್ಜನ ಮಠ, ಸವದತ್ತಿ ದಾನಲಿಂಗೇಶ್ವರ ಮಠದ ಶ್ರೀ ಸೋಮಲಿಂಗೇಶ್ವರ




ಮಹಾಸ್ವಾಮಿಗಳು, ವಿಜಯಪುರ ಶ್ರೀ ಮೂರು ಜಾವಾದೀಶ್ವರ ಮಠದ ಶ್ರೀ ಮಹೇಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶ್ರೀ ಜಗದ್ಗುರು ಮೌನೇಶ್ವರರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷರಾದ ಮೋಹನ್ ಸಿ.ನರಗುಂದ ಪ್ರಾಸ್ತಾವಿಕವಿಕವಾಗಿ ಮಾತನಾಡಿದರು.

ಡಾ. ಅಶೋಕ ಜತ್ತಿ, ಪೊಲೀಸ್ ಅಧಿಕಾರಿ ಚನ್ನಯ್ಯ ದೇವೂರ, ಶಂಕರಾಚಾರ್ಯ ಕಡ್ಲಾಸ್ಕರ, ಕಾರ್ಯದರ್ಶಿ ಮಹೇಶ ಹುಲಬಜಾರ, ಟ್ರಸ್ಟಿಗಳಾದ ವ್ಹಿ.ಎಮ್. ಕೊಟ್ರೇಶ್ ಆಚಾರ್ಯ, ನಿರಂಜನ ನಿಂಗಪ್ಪ ಬಡಿಗೇರ, ಚಂದ್ರಕಾಂತ ಸದಾಶಿವ ಸೋನಾರ, ಮೌನೇಶ ಜಿ.ಬಡಿಗೇರ (ನರೇಗಲ್ಲ), ಶ್ರೀಧರ ಕೊಣ್ಣೂರ ಸೇರಿದಂತೆ ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮುಖಂಡರಾದ ರಾಜಗೋಪಾಲ ಡಿ.ಕಡ್ಲಿಕೊಪ್ಪ ಸ್ವಾಗತಿಸಿದರು. ವಿಶ್ವನಾಥ ಯ.ಕಮ್ಮಾರ ನಿರೂಪಿಸಿ ವಂದಿಸಿದರು. ಕಾರ್ಕ್ರಮದಲ್ಲಿ ಸಮಸ್ತ ವಿಶ್ವಕರ್ಮ ಸಮಾಜ ಬಾಂಧವರು, ವರವಿ ಗ್ರಾಮಸ್ಥರು, ಸದ್ಭಕ್ತರು ಪಾಲ್ಗೊಂಡಿದ್ದರು.

# ಕರವೇ ಮಹಿಳಾ ಅಧ್ಯಕ್ಷರಾಗಿ ಲಕ್ಷ್ಮೀ ಹಿತ್ತಲಮನಿ ನೇಮಕ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ವತಿಯಿಂದ ವೇದಿಕೆಯ ಮಹಿಳಾ ಘಟಕದ ಗದಗ ಜಿಲ್ಲಾಧ್ಯಕ್ಷರನ್ನಾಗಿ ಲಕ್ಷ್ಮೀ ವಿ.ಹಿತ್ತಿಲಮನಿ ಇವರನ್ನು ಆಯ್ಕೆ ಮಾಡಲಾಗಿದೆ.

ಈ ಹಿಂದೆ ಗದಗ ತಾಲೂಕಾಧ್ಯಕ್ಷರಾಗಿ, ಗದಗ ಜಿಲ್ಲಾ ಉಪಾಧ್ಯಕ್ಷರಾಗಿ ಗದಗ ಜಿಲ್ಲೆಯಲ್ಲಿ ಮಹಿಳಾ ಘಟಕವನ್ನು ಉತ್ತಮವಾಗಿ ಕಟ್ಟಿದ್ದು, ನಾಡು, ನುಡಿ, ನೆಲ, ಜಲಕ್ಕೆ ಧಕ್ಕೆ ಬಂದಾಗ ಮಹಿಳೆರೊಂದಿಗೆ ಬೀದಿಗಿಳಿದು ಹೋರಾಟ ಮಾಡಿದ್ದಾರೆ. ಅವರ ಕ್ರಿಯಾಶೀಲತೆಯನ್ನು ಗಮನಿಸಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ ಆದೇಶದ ಮೇರೆಗೆ ಲಕ್ಷ್ಮೀ ವಿ. ಹಿತ್ತಲಮನಿಯವರನ್ನು ಗದಗ ಜಿಲ್ಲಾಧ್ಯಕ್ಷರಾದ ಹನಮಂತಪ್ಪ ಎಚ್.ಅಬ್ಬಿಗೇರಿ ಆಯ್ಕೆ ಮಾಡಿ ಆದೇಶ ಪತ್ರ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯದ ಸಮಿತಿ ಸದಸ್ಯರು, ರಾಜ್ಯ ಪದಾಧಿಕಾರಿಗಳು ಹಾಗೂ ಗದಗ ಜಿಲ್ಲಾ ಪದಾಧಿಕಾರಿಗಳು, ತಾಲೂಕಾ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಜರಿದ್ದರು.

### ಶಿರಹಟ್ಟಿ ತಾಲೂಕಿನಲ್ಲಿ 13 ತಿಂಗಳಿನಿಂದ ನಡೆದಿಲ್ಲ ಸಾಮಾನ್ಯ ಸಭೆ

# ಅಧಿಕಾರಿಗಳ ದರ್ಬಾರಿಗೆ ಶಾಸಕರೇ ಮದ್ದರೆಯಲಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ವಿಧಾನಸಭಾ ಮತಕ್ಷೇತ್ರದ ಕೇಂದ್ರಸ್ಥಳ ಹಾಗೂ ತಾಲೂಕಾ ಆಡಳಿತದ ಕೇಂದ್ರವಾಗಿದೆ. ತಾಲೂಕಿನಲ್ಲಿಯ ಎಲ್ಲ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಬೇಕಿದ್ದ ತಾಲೂಕು ಪಂಚಾಯಿತಿಯಲ್ಲಿ ಕಳೆದ 13 ತಿಂಗಳಿನಿಂದ ಸಾಮಾನ್ಯ ಸಭೆಯೇ ನಡೆಯದೆ ಸಾರ್ವಜನಿಕರು ಸುಸ್ತಾಗುತ್ತಿದ್ದಾರೆ.

ತಾ.ಪಂ ಅಧಿಕಾರಿಗಳು ನೀಡಿದ ಮಾಹಿತಿ ಪ್ರಕಾರ 5-7-2024ರಂದು ಸಾಮಾನ್ಯ ಸಭೆ ನಡೆದಿತ್ತು. 21-9-2023ರಂದು ಮಾಸಿಕ ಕೆಡಿಪಿ ಸಭೆ ಹಾಗೂ 11-2-2025ರಂದು ತ್ರೈಮಾಸಿಕ ಕೆಡಿಪಿ ಸಭೆ ನಡೆದಿದೆ. ಈ ಸಭೆಗಳಲ್ಲಿ ತಾಲೂಕಿನ ಸಮಗ್ರ ಅಭಿವೃದ್ಧಿಯ ಕುರಿತು ಚರ್ಚೆ ನಡೆಯಬೇಕಿತ್ತು. ಆದರೆ ಸಭೆಗಳೇ ನಡೆಯದೇ ಹೋದರೆ ಪರಿಶೀಲನೆ ನಡೆಸುವವರಾರು, ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿವೆಯಾ ಎಂಬುದನ್ನು ಗಮನಿಸುವವರು ಯಾರು, ಇತ್ತೀಚೆಗೆ ತಾಲೂಕಾ ಮಟ್ಟದ ಅಧಿಕಾರಿಗಳಲ್ಲಿ ಬಹುತೇಕರು ಹೊಸಬರು ಬಂದಿದ್ದು, ಸಾರ್ವಜನಿಕರ ಸಂಪರ್ಕಕ್ಕೆ ಸಿಗುತ್ತಿಲ್ಲ. ಹೀಗಾದರೆ ತಾಲೂಕಿನ ಅಭಿವೃದ್ಧಿ ಕುಂಠಿತವಾದರೆ ಯಾರು ಹೊಣೆ ಎಂಬ ಪ್ರಶ್ನೆಗಳು ಜನಸಾಮಾನ್ಯರ



ತಲೆಯ ಸುತ್ತ ಗಿರಕಿ ಹೊಡೆಯುತ್ತಿವೆ.

ಶಾಸಕ ಡಾ. ಚಂದ್ರು ಲಮಾಣಿ ಈ ಅವ್ಯವಸ್ಥೆಯ ಬಗ್ಗೆ ಗಮನ ಹರಿಸುವುದು ಅವಶ್ಯವಿದೆ. ತಾಲೂಕಿನ ಬಹುತೇಕ ಕಡೆಗಳಲ್ಲಿ ವಿವಿಧ ಯೋಜನೆಗಳಲ್ಲಿ ಹಲವು ಅಭಿವೃದ್ಧಿ ಕೆಲಸಗಳು ನಡೆಯುತ್ತಿದ್ದು, ಇವುಗಳ ಬಗ್ಗೆ ಸುದೀರ್ಘ ಚರ್ಚೆ ನಡೆಯಬೇಕಿದ್ದ ಪ್ರಗತಿಪರಿಶೀಲನಾ ಸಭೆಗಳು ನಡೆಯದೇ ಇರುವುದು ಹಲವು ಅಧಿಕಾರಿಗಳಿಗೆ ಲಾಭದಾಯಕವಾಗಿ ಪರಿಣಮಿಸುತ್ತಿದೆ. ಜೊತೆಗೆ ಕ್ಷೇತ್ರದ ಅಭಿವೃದ್ಧಿಗೆ ಈ ಅವ್ಯವಸ್ಥೆ ಮಾರಕವಾಗುತ್ತಿದೆ. ಆದ್ದರಿಂದ ಈ ಕೂಡಲೇ ತಮ್ಮ ಅಧ್ಯಕ್ಷತೆಯಲ್ಲಿ ಸಭೆ ಏರ್ಪಡಿಸಿ ತಾಲೂಕಿನ ಸಮಗ್ರ ಅಭಿವೃದ್ಧಿಯ ಕುರಿತು ಚರ್ಚೆ ನಡೆಸುವುದು ಅವಶ್ಯವಿದೆ. ಬೇಜವಾಬ್ದಾರಿ ತೋರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಬೇಕೆಂಬುದು ತಾಲೂಕಿನ ಪ್ರಜ್ಞಾವಂತರ ಅನಿಸಿಕೆಯಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಶಾಸಕ ಡಾ. ಚಂದ್ರು ಲಮಾಣಿ, ಇದೇ ವಾರದಲ್ಲಿ ಸಭೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುತ್ತೇನೆ ಎಂದರು. ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಪ್ರತಿಕ್ರಿಯಿಸಿ, ಶಾಸಕರ ದಿನಾಂಕ ಪಡೆದು ಸಭೆ ನಿಗದಿಪಡಿಸಲಾಗುವುದು ಎಂದಿದ್ದಾರೆ.

> ತಾ.ಪಂನಲ್ಲಿ ಆಡಳಿತ ಮಂಡಳಿ ಇಲ್ಲದೆ, ಪ್ರಗತಿ ಪರಿಶೀಲನೆ ಸಭೆಗಳೂ ಸಕಾಲಕ್ಕೆ ನಡೆಯದೇ ಇರುವುದರಿಂದ ಹಲವು ಅಧಿಕಾರಿಗಳಿಗೆ ಇದು ವರವಾಗಿ ಪರಿಣಮಿಸಿದೆ. ತಮ್ಮ ಇಲಾಖೆಯಲ್ಲಿ ತಾವು ಏನು ಮಾಡಿದರೂ ನಡೆಯುತ್ತೆ, ಇದನ್ನು ಕೇಳೋರು ಯಾರೂ ಇಲ್ಲವೆನ್ನುವ ರೀತಿಯಲ್ಲಿ ವರ್ತಿಸುತ್ತಿದ್ದಾರೆ. ಜಿಲ್ಲಾ ಮಟ್ಟದ ಅಧಿಕಾರಿಗಳು ಅಥವಾ ಸ್ಥಳೀಯ ಶಾಸಕರೇ ಇದಕ್ಕೆ ಮದ್ದರೆಯಬೇಕಿದೆ

# ಮಾಜಿ ಸೈನಿಕರೊಂದಿಗೆ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಮಾರ್ಕೆಟ್ ರಸ್ತೆಯಲ್ಲಿರುವ ಕಾರ್ಮಿಕ ಕಲ್ಯಾಣ ಸಂಸ್ಥೆಯ ಎಲ್ಲ ಪದಾಧಿಕಾರಿಗಳು 79ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಮಾಜಿ ಸೈನಿಕರಾದ ಶ್ರೀಶೈಲ್ ಚಳಗೇರಿ, ಶಿವಾನಂದ್ ಪಲ್ಲೇದ್, ಹನುಮಂತ ಹಲಕೋಟಿ, ಗಾಣಿಗೇರ್ ಇವರೊಂದಿಗೆ ಆಚರಿಸಿದರು.

ಸಂಸ್ಥೆಯ ಅಧ್ಯಕ್ಷ ಮೊಹಮ್ಮದ್ ಇರ್ಫಾನ್ ಡಂಬಳ ಸ್ವಾಗತ ಕೋರಿದರು. ಗೌರವಾಧ್ಯಕ್ಷ ಬೇಲೇರಿ, ಹಿರಿಯರಾದ ಭೀಮಪ್ಪ ಪೂಜಾರ್, ನಿಂಗಪ್ಪ ಕಟ್ಟಿಮನಿ, ಶಂಕರ ಗುರುಬಸಣ್ಣವರ್, ಮಹಾಸಂಘದ ಅಧ್ಯಕ್ಷ ಮೆಹಬೂಬ್‌ಖಾನ್ ಪಠಾಣ್, ಕಾರ್ಮಿಕ ಕಲ್ಯಾಣ ಸಂಸ್ಥೆಯ ಕಾರ್ಯಾಧ್ಯಕ್ಷ ನಾಸೀರ್ ಚಿಕೇನಕೊಪ್ಪ, ಯುವ ಕರ್ನಾಟಕ ಭೀಮಸೇನೆಯ ಅಧ್ಯಕ್ಷ ರಾಮು ಬಾಗಲಕೋಟೆ, ಶಹರ ಘಟಕದ ಅಧ್ಯಕ್ಷ ಶಬ್ಬೀರ್ ತಹಸೀಲ್ದಾರ್, ಇಬ್ರಾಹಿಂ ಹಳ್ಳಿಕೇರಿ, ನೂರ್ ಬಳ್ಳಾರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ಸ್ವಾತಂತ್ರ್ಯೋತ್ಸವದ ಶುಭಾಶಯಗಳು ತಿಳಿಸಿದರು.

ಮಹಮ್ಮದ್‌ಯೂಸುಫ್ ಬೇಪಾರಿ, ಜಂಧಿಸಾಬ್ ಬಳ್ಳಾರಿ ಮುಲ್ಲಾ, ಇಮಾಮಸಾಬ್ ಕದಡಿ, ಏಕನಾಥ್ ವಾಲ್ಮೀಕಿ, ರಫೀಕ್ ಕರೆಕಾಯಿ, ಸಾಧಿಕ್ ಧಾರವಾಡ, ಖಾಜಾಸಾಬ್ ಗಬ್ಬುರ್, ಯಂಕಪ್ಪ ತಾಳದವರ್, ಜಬಿವುಲ್ಲಾ ಬೋದ್ಲೆಖಾನ, ರಶೀದ್ ನಾಗರದಿನ್ನಿ, ಜಾವಿದ್ ಹೈದರ್, ಈಶ್ವರ್ ಲಕ್ಷ್ಮೇಶ್ವರ, ಬಾಬಾಜಾನ್ ಹಣಗಿ, ದಾವಲ್‌ಸಾಬ್ ಮುನ್ನಾ, ಕೃಷ್ಣ ಜಾದವ್, ರಫೀಕ್ ಕುಂದಗೋಳ, ಮೆಹಬೂಬ್‌ಶೇಖ ತಬರೇಜ್, ಚಿತ್ರಗಾರ, ಸದ್ದಾಂ ನಾಶಿಪುಡಿ, ನಜೀರ್ ಕೊಟ್ಟೂರ್, ಮುದಸ್ಸರ ಬಳ್ಳಾರಿ, ಮೋತಿಲಾಲ್ ಮಳಗಿಮನಿ, ಖಲೀಲ್ ಬಳ್ಳಾರಿ, ಶೌಕತ್ ಯರಂಡಿವಾಲೆ, ಎಂ.ಡಿ. ಮುಲ್ಲಾ, ರಾಜೇಂದ್ರ ಕಮ್ಮಾರ್, ಶಂಕ್ರಪ್ಪ ಲಂಗೋಟಿ, ವಸಂತ ದೇವದುರ್ಗ, ಮೈನು ಆದಂಬೈ, ಪ್ರಶಾಂತ್, ಸಿರಾಜ್ ಲಕ್ಕುಂಡಿ, ಚಲವಾದಿ, ರೇಖಾ, ಸಂತೋಷ ಹುಲ್ಲೂರ್, ಬಸವರಾಜ್ ಹುಲಕೋಟಿ, ಅಸ್ಲಂ ದಂಡಿನ್, ಖಾಲಿದ್ ಹೊಂಬಳ, ಪರಶುರಾಮ್ ಈಳಿಗೇರ, ಶಾಬುದ್ದೀನ್ ಧಾರವಾಡ, ರಾಚಪ್ಪ ಬ್ಯಾಳಿ, ರಮೇಶ್ ವಾಲ್ಮೀಕಿ, ಶಂಕರಗೌಡ ಭರಮಗೌಡ್ರ. ಸಿ.ಕೆ. ಪಾಟೀಲ್, ದುರ್ಗಪ್ಪ ಗುಡಿಮನಿ, ಈಶ್ವರಪ್ಪ ಕಪ್ಪತ್ತನವರ ಮುಂತಾದವರು ಪಾಲ್ಗೊಂಡಿದ್ದರು.

### ನೇಕಾರರ ಪತ್ತಿನ ಸಹಕಾರ ಸಂಘದ ವಾರ್ಷಿಕ ಸಭೆ । ಶೇ. 10 ಡಿವಿಡೆಂಡ್ ಘೋಷಣೆ

# ನೇಕಾರರ ಸಹಕಾರ ಸಂಘ ಪ್ರಗತಿಯಲ್ಲಿ ಮುನ್ನಡೆ

■ ವಿಜಯಸಾಕ್ಷಿ ಸುದ್ದಿ, ಗದಗ

ನೇಕಾರರ ಪತ್ತಿನ ಸಹಕಾರ ಸಂಘ ನಿ. ಗದಗ-ಬೆಟಗೇರಿ ಪ್ರಗತಿಯೊಂದಿಗೆ ಮುನ್ನಡೆದಿದ್ದು, 2024-25ನೇ ಸಾಲಿನಲ್ಲಿ 7 ಲಕ್ಷ 46 ಸಾವಿರಕ್ಕೂ ಹೆಚ್ಚು ಲಾಭ ಪಡೆದಿದೆ. ಶೇರುದಾರ ನೇಕಾರರಿಗೆ ಶೇ. 10ರಷ್ಟು ಡಿವ್ಹಿಡೆಂಡ್ ನೀಡಲಾಗುವದು ಎಂದು ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಹೇಳಿದರು.

ಅವರು ಇತ್ತೀಚೆಗೆ ಬೆಟಗೇರಿಯ ಹೊಸ ಬನಶಂಕರಿ ದೇವಸ್ಥಾನದ ಸಭಾಂಗಣದಲ್ಲಿ ಜರುಗಿದ ಸಂಘದ 14ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

2011ರಲ್ಲಿ ಸ್ಥಾಪನೆಯಾದ ಸಂಘವು ಕಳೆದ 14 ವರ್ಷಗಳಿಂದ ನೇಕಾರರಿಗೆ ಆರ್ಥಿಕ ನೆರವು ನೀಡುವ ಮೂಲಕ ಅವರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಶ್ರಮಿಸಿದೆ. ಆರಂಭದಲ್ಲಿ 380 ಸದಸ್ಯರನ್ನು



ಹೊಂದಿದ್ದ ಸಂಘವು ಇದೀಗ 830 ಸದಸ್ಯರನ್ನು ಹೊಂದಿದೆ. ನೇಕಾರರಿಗೆ ಸಾಲ, ಜಾಮೀನು ಸಾಲ, ವಾಹನ ಸಾಲ ನೀಡಲಾಗಿದ್ದು, ಸಾಲ ವಸೂಲಾತಿಗೆ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳುವ ಮೂಲಕ ಸಂಘದ ಪ್ರಗತಿಗೆ ಎಲ್ಲ ನಿರ್ದೇಶಕರು ಕೈ ಜೋಡಿಸಿದ್ದಾರೆ ಎಂದರು.

ನೇಕಾರರು ಇದ್ದ ವ್ಯವಹಾರವನ್ನು ಅಭಿವೃದ್ಧಿಪಡಿಸಲು ಸಂಘವು ತನ್ನದೇ ಆದ ಇತಿಮಿತಿಯಲ್ಲಿ ಸಹಾಯ-ಸಹಕಾರ ನೀಡುವ ಮೂಲಕ ಸರಕಾರದ ಮೂಲಕ ಆಗಬೇಕಿರುವ ಸೌಲಭ್ಯಗಳಿಗಾಗಿ ಬೇಡಿಕೆಯ ಮನವಿ ಸಲ್ಲಿಸುತ್ತಾ ಬಂದಿದೆ ಎಂದರು.

ಸಂಘದ ಉಪಾಧ್ಯಕ್ಷ ವಿಜಯಕುಮಾರ ಕಬಾಡಿ ಮಾತನಾಡಿ, ನೇಕಾರರ ಕಲ್ಯಾಣಕ್ಕಾಗಿ ಹುಟ್ಟಿಕೊಂಡ ಈ ಸಂಘವು ಸದಾಕಾಲ ನೇಕಾರರ ಶ್ರೇಯಸ್ಸಿಗೆ ಶ್ರಮಿಸುತ್ತ ಬಂದಿದೆ. ಸಾಲ ಪಡೆದವರು ಸರಿಯಾಗಿ ಮರುಪಾವತಿ ಮಾಡಿ ಇನ್ನೊಬ್ಬ ನೇಕಾರರಿಗೆ ಅಗತ್ಯವಿದ್ದ ಸಾಲ ಪಡೆಯಲು ಪರೋಪಕ್ಷವಾಗಿ ಸಹಕಾರ ನೀಡಬೇಕು ಎಂದರು.

ಹಿರಿಯ ನಿರ್ದೇಶಕ ಅಮರೇಶ ಚಾಗಿ ಮಾತನಾಡಿ, ನಮ್ಮ ಸಹಕಾರಿ ಸಂಘಕ್ಕೆ ಸ್ವಂತ ಕಟ್ಟಡದ ಅವಶ್ಯಕತೆಯಿದ್ದು, ಮಧ್ಯವರ್ತಿ ಸ್ಥಳದಲ್ಲಿ ಜಾಗೆ-ಕಟ್ಟಡವನ್ನು ಗುರುತಿಸಲಾಗುತ್ತಿದೆ. ಬರಲಿರುವ ದಿನಗಳಲ್ಲಿ ಸ್ವಂತ ಕಟ್ಟಡದ ಉದ್ದೇಶವನ್ನು ಹೊಂದಲಾಗಿದೆ ಎಂದರಲ್ಲದೆ, ಈ ಸಲ ಲಾಭಾಂಶದಲ್ಲಿ ಶೇರುದಾರರಿಗೆ ಶೇ. 10 ಡಿವ್ಹಿಡೆಂಡ್ ನೀಡಲು ಸರ್ವ ನಿರ್ದೇಶಕರು ಒಪ್ಪಿಗೆ ಸೂಚಿಸಿದ್ದಾರೆ ಎಂದು ತಿಳಿಸಿದರು.

ವೇದಿಕೆಯ ಮೇಲೆ ನಿರ್ದೇಶಕರಾದ ವಿಜಯಕುಮಾರ ಕಬಾಡಿ, ಅಮರೇಶ ಚಾಗಿ, ಅನಿಲ ಗಡ್ಡಿ, ನಾಮದೇವ ಸೊರೆ, ವಿಷ್ಣು ಪಾಸ್ತೆ, ಸುಭಾಸ ಗಂಜಿ, ವೀರಭದ್ರಪ್ಪ ಗಂಜಿ, ಮೋಹನಸಾ ರಾಯಬಾಗಿ, ಮುಖ್ಯ ಕಾರ್ಯನಿರ್ವಾಹಕ ಪ್ರಭು ನೀಲಗುಂದ ಉಪಸ್ಥಿತರಿದ್ದರು.

ನಿರ್ದೇಶಕ ಅನಿಲ ಗಡ್ಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘದ ಅಸ್ತಿತ್ವ, ನಡೆದು ಬಂದ ದಾರಿಯ ಕುರಿತು ವಿವರಿಸಿದರು. ಸುಭಾಸ ಗಂಜಿ ಅಢಾವೆ ಪತ್ರಿಕೆ ಓದಿದರು. ಮುಖ್ಯ ಕಾರ್ಯ ನಿರ್ವಾಹಕ ಪ್ರಭು ನೀಲಗುಂದ ನಿರೂಪಿಸಿದರು. ವೀರೇಶ ಕುಂಬಾರ ವಂದಿಸಿದರು. ಸಮಾರಂಭದಲ್ಲಿ ಜವಳಿ ಉದ್ದಿಮೆದಾರರು, ನೇಕಾರರು ಪಾಲ್ಗೊಂಡಿದ್ದರು.

> ಇದೇ ಸಂದರ್ಭದಲ್ಲಿ ಸಹಕಾರ ಸಂಸ್ಥೆಯೊಂದಿಗೆ ಉತ್ತಮ ವ್ಯವಹಾರ ಬಾಂಧವ್ಯ ಹೊಂದಿದ ಮೋಹನಸಾ ಬಸವಾ, ಗವಿಸಿದ್ದಪ್ಪ ಆನಂದ, ತಿಪ್ಪಣ್ಣ ನೀಲಗುಂದ, ನಾರಾಯಣಪ್ಪ ಗಂಜಿ, ಸಕ್ರಪ್ಪ ಐಲಿ, ಹನಮಂತಪ್ಪ ಶ್ಯಾವಿ, ವೆಂಕಟೇಶ ಭೀಮನಪಲ್ಲಿ, ಉಮೇಶ ಅಸುಂಡಿ, ಚಿನ್ನಪ್ಪ ಮುದಗಲ್ಲ, ಮಾರ್ಕಂಡೆಪ್ಪ ಮುದ್ದಾ, ಲಕ್ಷ್ಮಣ ಮಿಟ್ಟಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

### ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಅಂಗವಾಗಿ ಶರಣ ಚರಿತಾಮೃತ

# ಮರ್ತ್ಯಲೋಕವೆಲ್ಲವೂ ಭಕ್ತಿಯ ಸಾಮ್ರಾಜ್ಯವಾಗಿತ್ತು

■ ವಿಜಯಸಾಕ್ಷಿ ಸುದ್ದಿ, ಗದಗ

ಪುರಾತನರು ಮರ್ತ್ಯ ಲೋಕದಲ್ಲಿ ಭಕ್ತಿಯ ಮನೆ ಕಟ್ಟಿಕೊಂಡು ಇದ್ದರು. ಆದರೆ ಅವರು ಭಕ್ತಿಯ ಮಾಡಿ ಸ್ವರ್ಗಕ್ಕೆ ಹೋದರು ಎಂದು ಆಧ್ಯಾತ್ಮ ವಿದ್ಯಾಶ್ರಮದ ಶರಣೆ ನೀಲಮ್ಮತಾಯಿಯವರು ನುಡಿದರು.

ಗದಗ ನಗರದ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಅಂಗವಾಗಿ ನಡೆದ ಶರಣ ಚರಿತಾಮೃತ ಪ್ರವಚನದಲ್ಲಿ ಅವರು ಮಾತನಾಡುತ್ತಿದ್ದರು.

12ನೇ ಶತಮಾನದ ಬಸವಾದಿ ಶಿವಶರಣರು ಮರ್ತ್ಯದಲ್ಲಿ ಬಂದು ಕಲ್ಯಾಣದಲ್ಲಿ ಭಕ್ತಿಯ ಮಹಾಮನೆ ಕಟ್ಟಿದರೆ, ಮರ್ತ್ಯಲೋಕವೆಲ್ಲವೂ ಭಕ್ತಿಯ ಸಾಮ್ರಾಜ್ಯವಾಗಿತ್ತು. ಆ ಮನೆಗೆ ತೆಲೆಬಾಗಿ, ಕೈಮುಗಿದು ಹೋದವರೆಲ್ಲರೂ ನಿಜಲಿಂಗ ಪದವಿಯನ್ನು ಪಡೆದರು. ಗಮನಾಗಮದರಹಿತ ನಿಜದ ನಿಲುವಿನಲ್ಲಿ ನಿಜಮುಕ್ತಿಂ ಪಡೆದವರು ಶಿವಶರಣರು ಎಂದು





ಶಿವಶರಣೆ ನೀಲಮ್ಮತಾಯಿಯವರು ಅರ್ಥಪೂರ್ಣವಾಗಿ ತಿಳಿಸಿದರು.

ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ನಡೆಸಿದರು. ಹೇಮೇಂದ್ರಕುಮಾರ ಹಿರೇಮಠ ತಬಲಾ ಸಾಥ್ ನೀಡಿದರು. ಪ್ರಸಾದದ ಸೇವೆಯನ್ನು ಪ್ರಭುಗೌಡ ಕುಬೇರಗೌಡ ಚಿನ್ನಪ್ಪಗೌಡರು ಹಾಗೂ ಕುಟುಂಬದವರು ವಹಿಸಿದ್ದರು.

ಈ ಸಂದರ್ಭದಲ್ಲಿ ಟ್ರಸ್ಟ್ ಕಮಿಟಿಯ ಸದಸ್ಯರಾದ ಕೊಟ್ರಪ್ಪಕಮತರ, ಎಂ.ಎಂ. ಹಿರೇಮಠ ವಕೀಲರು, ಶಿವಣ್ಣ ಕತ್ತಿ, ಮುರಿಗೆಪ್ಪ ನಾಲವಾಡ, ಹಿರಿಯರಾದ ವಿರೂಪಾಕ್ಷಪ್ಪ ಅಕ್ಕಿ, ಬಸವರಾಜ ಜಂತ್ಲಿ, ಶಿವಣ್ಣ ಇಟ್ನಳ್ಳಿ, ಪುರಾಣ ಪ್ರವಚನ ಸಮಿತಿ ಅಧ್ಯಕ್ಷರಾದ ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಗಂಗಾಧರ ಮೇಲಗಿರಿ, ಗಂಗಾಧರ ನಂದಿಕೋಲಮಠ, ಶ್ರಿಶೈಲಪ್ಪ ಪಟ್ಟಣಶೆಟ್ಟಿ, ಸುರೇಶ ಮಾಳವಾಡ, ಪ್ರಭು ಶೆಟ್ಟರ, ಸುಭಾಸ ಹವಳೆ, ವಿರೂಪಾಕ್ಷಪ್ಪ ಅಂಗಡಿ, ಮಲ್ಲಿಕಾರ್ಜುನ ಹಿರೇಮಠ, ಶಂಕರ ನೀರಲಕೇರಿ, ಸುರೇಶ ನಿಲುಗಲ್ಲ, ಅಶೋಕ ತಮ್ಮಳ್ಳಿ, ಬಸವರಾಜ ಮೊರಬದ, ಪಂಚಾಕ್ಷರ ಅಂಗಡಿ, ನವೀನ ನಾಲ್ವಾಡ, ಸುರೇಶ ಹೆಬಸೂರ, ಪ್ರಕಾಶ ಜಂತ್ಲಿ, ಸತ್ಸಂಗದ ಸದಸ್ಯರಾದ ಸುನಂದಾ ಜೋಬಾಳೆ, ಬೀನಾ ಮಾನ್ವಿ, ಉಮಾ ಪಟ್ಟಣಶೆಟ್ಟಿ, ಜಯಶ್ರೀ ನಿಲೂಗಲ್, ಕಸ್ತೂರಕ್ಕ ಮಾನ್ವಿ, ಶರಣಮ್ಮ ಶಿರೂರ, ಸುಶೀಲಾ ನಿಲೂಗಲ್ಲ, ನೀಲಕ್ಕ ಕಗನಳ್ಳಿ, ಅನಸಕ್ಕ ಮೇಲಗಿರಿ, ಶೈಲಾ ಮಾನ್ವಿ ಮುತಾದವರು ಭಾಗವಹಿಸಿದ್ದರು.

> ಈಶ್ವರೀಯ ವಿಶ್ವವಿದ್ಯಾಲಯದ ಸಹೋದರಿ ಬಿ.ಕೆ. ಸುಮಿತ್ರಕ್ಕನವರು ಮಾತನಾಡುತ್ತಾ, ರಕ್ಷಾಬಂಧನವನ್ನು ನೂರಾರು ವರ್ಷಗಳಿಂದ ಆಚರಿಸುತ್ತಾ ಬಂದಿದ್ದು, ಪ್ರತಿಯೊಬ್ಬ ಸಹೋದರಿಗೆ ಸಹೋದರನ ಬೆಂಬಲ, ರಕ್ಷಣೆ ಬೇಕೇ ಬೇಕು. ಹಿಂದೆ ಮಹಾಭಾರತದಲ್ಲಿ ಶ್ರೀಕೃಷ್ಣನ ಬೆರಳಿಗೆ ಗಾಯವಾದಾಗ ದ್ರೌಪದಿಯು ತನ್ನ ಸೀರೆಯ ಸೆರಗನ್ನು ಹರಿದು ಶ್ರೀಕೃಷ್ಣನ ಬೆರಳಿಗೆ ಕಟ್ಟಿದ್ದಳು. ಮುಂದೊಂದು ದಿನ ದ್ರೌಪತಿಗೆ ಸಂಕಷ್ಟ ಬಂದಾಗ ಕೃಷ್ಣನ ಆಶೀರ್ವಾದದಿಂದ ಯಾವುದೇ ತೊಂದರೆ ದ್ರೌಪದಿಗೆ ಆಗಿಲ್ಲ ಎಂದರು.

# ಮಳೆ ಹಾನಿಗೆ ಪರಿಹಾರ ನೀಡಲು ಮನವಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ ಬೆಳೆಗಳು ಅತಿವೃಷ್ಟಿಯಿಂದ ಕೊಳೆತು ಹಾಳಾಗುತ್ತಿದ್ದು, ಬೆಳೆವಿಮೆ ಮತ್ತು ಬೆಳೆ ಪರಿಹಾರ ದೊರಕಿಸಿಕೊಡಬೇಕೆಂದು ಭಾರತೀಯ ಕಿಸಾನ್ ಸಂಘದ ವತಿಯಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ಶಂಕರಗೌಡ ಪಾಟೀಲ, 2025ರಲ್ಲಿ ಬಿತ್ತನೆ ಮಾಡಿದ ಬೆಳೆಗಳು 70ರಿಂದ 80 ದಿವಸಗಳ ಅವಧಿಯ ಬೆಳೆಗಳಾಗಿದ್ದು, ಹೆಸರು, ಮೆಕ್ಕೆಜೋಳ, ಬಿಟಿ ಹತ್ತಿ, ಶೇಂಗಾ, ಎಳ್ಳು, ಸೊಯಾಬಿನ್ ಸೇರಿದಂತೆ ಅನೇಕ ಬೆಳೆಗಳು ಕಟಾವು ಹಂತಕ್ಕೆ ಬಂದಿದ್ದವು. ಇದೀಗ ಸತತ ಮಳೆಯಿಂದ ಬೆಳೆಗಳು ಹಾನಿಗೀಡಾಗಿವೆ. ಆದ್ದರಿಂದ ಸೂಕ್ತ ಪರಿಹಾರ ಒದಗಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಮೇಶ ಕೋಳಿವಾಡ, ಚನ್ನಪ್ಪ ಷಣ್ಮುಖಿ, ಸಂಜೀವ ಹುಡೇದ, ವಿಜಯಕುಮಾರ ಅಡವಿ, ವೀರನಗೌಡ ಪಾಟೀಲ, ಅವರೆಡ್ಡಿ ಗುತ್ತಲ, ಚನ್ನಬಸಪ್ಪ ಹಾವೇರಿ, ಮಲ್ಲಿಕಾರ್ಜುನ ಪಾಟೀಲ, ಶಿವಲಿಂಗಪ್ಪ ಕೋಡಿ, ಶಿವಪ್ಪ ಹತ್ತಿಕಾಳ, ಸಂಗಪ್ಪ ನಂದಗಾವಿ, ರಾಮನಗೌಡ ಪಾಟೀಲ, ಚಂದ್ರಶೇಖರ ಬೂದಿಹಾಳ, ಅಶೋಕ ಮುಳಗುಂದ, ಬಸವರಾಜ ಮಲಿಗೋಡ ಮುಂತಾದವರು ಉಪಸ್ಥಿತರಿದ್ದರು.



ಶ್ರೀಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ಗದಗ ನಗರದ ನಿವಾಸಿ ನಾಗರಾಜ ದೊಡ್ಡಮನಿ ಅವರ ಪುತ್ರ ರಜತ ಶ್ರೀಕೃಷ್ಣನ ವೇಷಧಾರಿಯಾಗಿ ಎಲ್ಲರ ಕಣ್ಮನ ಸೆಳೆದನು.

# ದುರ್ಗಾದೇವಿ ಸೊಸೈಟಿಯ ವಾರ್ಷಿಕ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಗಂಗಾಪೂರ ಪೇಟೆಯ ಶ್ರೀ ದುರ್ಗಾದೇವಿ ಕೋ-ಆಪ್ ಕ್ರೆಡಿಟ್ ಸೊಸೈಟಿಯ 21ನೇ ವಾರ್ಷಿಕ ಸರ್ವ ಸಾಧರಣ ಸಭೆಯನ್ನು ಆಗಸ್ಟ್ 21ರ ಮುಂಜಾನೆ 11 ಗಂಟೆಗೆ ನಗರದ ಶ್ರೀ ದುರ್ಗಾದೇವಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದೆ. ಸೊಸೈಟಿ ಅಧ್ಯಕ್ಷ ಎಂ.ಎಸ್. ಪಾಟೀಲ ಸಭೆಯ ಅಧ್ಯಕ್ಷತೆ ವಹಿಸುವರು. ಈ ಕಾರ್ಯಕ್ರಮಕ್ಕೆ ವಿಜಯಪೂರ ಜಿಲ್ಲೆ ಇಂಡಿ ತಾಲೂಕು ತಾಂಬಾ ಗ್ರಾಮದ ಅಂತಾರಾಷ್ಟ್ರೀಯ ಖ್ಯಾತಿಯ ರೈತ ಭೀರಪ್ಪ ಎಸ್.ವಗ್ಗಿ ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು. ಈ ಸಂದರ್ಭದಲ್ಲಿ ರೈತರಾದ ಕಳಸಾಪೂರ ರಮೇಶ ಚವ್ಹಾಣ, ಗದುಗಿನ ಹನುಮಂತಪ್ಪ ಕೋಟೆಣ್ಣವರ ಇವರುಗಳಿಗೆ ಸತ್ಕರಿಸಿ ಗೌರವಿಸಲಾಗುವುದು.

ಶ್ರೀ ದುರ್ಗಾದೇವಿ ಕೋ-ಆಪ್ ಕ್ರೆಡಿಟ್ ಸೊಸೈಟಿಗೆ ಸಂಬಂಧಿಸಿದ ಅನೇಕ ಮಹತ್ವದ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಗುವುದು. ಕಾರ್ಯಕ್ರಮದಲ್ಲಿ ಅಧ್ಯಕ್ಷ, ಉಪಾಧ್ಯಕ್ಷ, ನಿರ್ದೇಶಕ ಮಂಡಳಿಯವರು ಹಾಗೂ ಸದಸ್ಯರು ಪಾಲ್ಗೊಳ್ಳುವರು. ಈ ವಿಶೇಷ ಕಾರ್ಯಕ್ರಮದಲ್ಲಿ ಸದಸ್ಯರು ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ವ್ಯವಸ್ಥಾಪಕರಾದ ಬಸವರಾಜ ಐ.ಕೋರಿ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಸದ್ಭಾವನಾ ದಿನಾಚರಣೆ; ಪ್ರತಿಜ್ಞಾವಿಧಿ ಸ್ವೀಕಾರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮಾಜದಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಎಲ್ಲರೂ ಸದ್ಭಾವನೆಯೊಂದಿಗೆ ಇರುವಂತಾಗಬೇಕು. ದೇಶದ ಹಿತಕ್ಕಾಗಿ ಸಂವಿಧಾನಾತ್ಮಕ ಕ್ರಮಗಳ ಮೂಲಕ ಸಮಾಜಮುಖಿಯಾಗಬೇಕು ಎಂದು ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಹೇಳಿದರು.

ಸ್ಥಳೀಯ ಪಟ್ಟಣ ಪಂಚಾಯಿತಿ ಸಭಾಭವನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸದ್ಭಾವನಾ ದಿನಾಚರಣೆ ಅಂಗವಾಗಿ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು. ಹಲವಾರು



ಮತ-ಪಂಥಗಳು, ಜಾತಿ ಮತ್ತು ಧರ್ಮಗಳನ್ನೊಳಗೊಂಡಿರುವ ಭಾರತ ಇಡೀ ವಿಶ್ವದಲ್ಲಿಯೇ ಮಾನವೀಯ ಮೌಲ್ಯಗಳನ್ನು ಬಳಸಿಕೊಂಡು ಬೆಳವಣಿಗೆಯಲ್ಲಿ ಮಂಚೂಣಿಯಲ್ಲಿದೆ. ಇದಕ್ಕೆ ಪ್ರಮುಖ ಕಾರಣ ನಮ್ಮಲ್ಲಿರುವ ಆತ್ಮಸ್ಥೈರ್ಯ ಮತ್ತು ಶಾಂತಿಯ ಭಾವ. ಎಲ್ಲಾ ಧರ್ಮ, ಭಾಷೆ ಹಾಗೂ ಜನರಲ್ಲಿ ಸೌಹಾರ್ದತೆ ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆ ಮೂಡಿಸಿ ಹಿಂಸಾಚಾರ ತ್ಯಜಿಸುವಂತೆ ಮಾಡುವುದು ಸದ್ಭಾವನಾ ದಿನದ ಉದ್ದೇಶವಾಗಿದೆ. ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿ ವರ್ಷ ಆಗಸ್ಟ್ 20ರಂದು ಸದ್ಭಾವನಾ ದಿನವನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

'ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧ-ಭಾವವಿಲ್ಲದೆ ಭಾರತದ ಎಲ್ಲಾ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆ. ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಪ್ರತಿಜ್ಞೆ ಮಾಡುತ್ತೇನೆ' ಎಂಬ ಪ್ರತಿಜ್ಞಾವಿಧಿಯನ್ನು ಎಲ್ಲರೂ ಸ್ವೀಕರಿಸಿದರು.

ಈ ವೇಳೆ ಎಂ.ಎಚ್. ಸೀತಿಮನಿ, ರಮೇಶ ಹಲಗಿಯವರ, ಅಡಿವೆಪ್ಪ ಮೆಣಸಿಗಿ, ರಕ್ಷತ ಎಲ್, ಮಣಿಕಂಠ ಹೂಗಾರ, ಶೇಖಪ್ಪ ಹೊನವಾಡ, ಉದಯ ಮುದೇನಗುಡಿ, ವಿವೇಕ ಅಣಗೌಡ್ರ, ಮಹಾದೇವ ಮ್ಯಾಗೇರಿ, ದುರಗಪ್ಪ ಪಾದಗಟ್ಟಿ, ಮಲ್ಲಯ್ಯ ಹಿರೇವಡೆಯರ, ರವಿ ನಡುವಲಕೇರಿ, ಎನ್.ಬಿ. ಬೇಲೇರಿ, ಕಾವ್ಯಾ ಅರವಟಗಿಮಠ, ನೀಲಪ್ಪ ಚಳ್ಳಮರದ, ಜಮೀಲಾಬೇಗಂ ಬಂಕಾಪೂರ ಸೇರಿದಂತೆ ಇತರರಿದ್ದರು.

## ಚಿಕ್ಕ ಮಕ್ಕಳ ಉಚಿತ ಚಿಕಿತ್ಸಾ ಶಿಬಿರ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಫ್ರಾನ್ಸ್ ಇಂಡಿಯಾ ಕರ್ನಾಟಕ (FIK) ಆಸ್ಪತ್ರೆಯಲ್ಲಿ ಆಗಸ್ಟ್ 21ರಂದು ಚಿಕ್ಕ ಮಕ್ಕಳ ಉಚಿತ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಮಹೇಶ ಘಟರೆಡ್ಡಿಹಾಳ ಅವರ 18ನೇ ವರ್ಷದ ಸ್ಮರಣಾರ್ಥ ಈ ಆರೋಗ್ಯ ಶಿಬಿರವನ್ನು ಆಯೋಜಿಸುತ್ತಿದ್ದು, ಹಳ್ಳಿಗುಡಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಈ ಉಚಿತ ಆರೋಗ್ಯ ಶಿಬಿರದ ಸದುಪಯೋಗ ಪಡೆಯುವಂತೆ ಸುಶೀಲಾ ಘಟರೆಡ್ಡಿಹಾಳ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಳಗನಾಥ, ನಾ. ಶ್ರೀ. ರಾಜಪುರೋಹಿತ ಪ್ರತಿಷ್ಠಾನದ ಅಧ್ಯಕ್ಷರಾಗಿ ಡಾ. ಕೆ.ಆರ್. ಕಮಲೇಶ ನೇಮಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವ್ಯಾಪ್ತಿಯಲ್ಲಿನ ಹಾವೇರಿ ಜಿಲ್ಲೆಯ ಗಳಗನಾಥ ಮತ್ತು ನಾ. ಶ್ರೀ. ರಾಜಪುರೋಹಿತ ಪ್ರತಿಷ್ಠಾನದ ಪದಾಧಿಕಾರಿಗಳನ್ನು ನೇಮಕ ಮಾಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರಕಾರದ ಅಧೀನ ಕಾರ್ಯದರ್ಶಿ ಎಸ್. ಗೀತಾಬಾಯಿ ಆದೇಶ ಹೊರಡಿಸಿದ್ದಾರೆ.

ಪ್ರತಿಷ್ಠಾನದ ಅಧ್ಯಕ್ಷರಾಗಿ ಡಾ. ಕೆ.ಆರ್. ಕಮಲೇಶ, ಸದಸ್ಯರಾಗಿ ವಸಂತ ರಾಜರೋಹಿತ, ವೆಂಕಟೇಶ ಗಳಗನಾಥ, ಕೊಟ್ರೇಶಪ್ಪ ಬಸೆಗಣ್ಣಿ, ವೆಂಕಟೇಶ ಮಾಚಕನೂರ, ಡಾ. ರೇವಯ್ಯ ಒಡೆಯರ್, ರಾಜೇಸಾಬ್ ನದಾಫ್, ಉಮೇಶ ಬಳಿಗಾರ, ರೇಣುಕಾ ಗುಡಿಮನಿ, ಪ್ರಮೋದ ನೆಲವಾಗಲು ಹಾಗೂ ಸದಸ್ಯ ಕಾರ್ಯದರ್ಶಿಯಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಜಿಲ್ಲಾಧ್ಯಕ್ಷೆ ಸುಧಾ ಹುಚ್ಚಣ್ಣವರ

# ದ್ವಿತೀಯ ಕದಳಿ ಮಹಿಳಾ ಸಮ್ಮೇಳನ ಆ.24ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಆಗಸ್ಟ್ 24ರಂದು ಗದಗ ಜಿಲ್ಲಾ ದ್ವಿತೀಯ ಕದಳಿ ಮಹಿಳಾ ಸಮ್ಮೇಳನ ನಡೆಯಲಿದ್ದು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ ರಾಷ್ಟ್ರ ಧ್ವಜಾರೋಹಣ ಹಾಗೂ ಪರಿಷತ್ ಧ್ವಜಾರೋಹಣವನ್ನು ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ನೇರವೇರಿಸಲಿದ್ದಾರೆ ಎಂದು ಕದಳಿ ವೇದಿಕೆಯ ಜಿಲ್ಲಾಧ್ಯಕ್ಷೆ ಸುಧಾ ಹುಚ್ಚಣ್ಣವರ ತಿಳಿಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಅವರು, ಕಾರ್ಯಕ್ರಮದ ಗೌರವ ಉಪಸ್ಥಿತಿಯನ್ನು ಶರಣ ಚಿಂತಕ ಕೆ.ಎಚ್. ಬೇಲೂರ, ಕ.ಸಾ.ಪ ಮಾಜಿ ಜಿಲ್ಲಾಧ್ಯಕ್ಷರುಗಳಾದ ಡಾ. ಶಿವಪ್ಪ ಕುರಿ, ಡಾ. ಶರಣು ಗೋಗೇರಿ, ಶರಣ ಚಿಂತಕರಾದ ಲಲಿತಾ ಕೆರಿಮನಿ ಹಾಗೂ ಡಾ. ಎಸ್.ಸಿ. ಚವಡಿ ಮುಂತಾದವರು ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಮ.ನಿ.ಪ್ರ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು



ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ ವಹಿಸುವರು. ಕಾರ್ಯಕ್ರಮ ಉದ್ದೇಶಿಸಿ ಪ್ರಾಸ್ತಾವಿಕವಾಗಿ ಸುಧಾ ಎಸ್.ಹುಚ್ಚಣ್ಣವರ ಮಾತನಾಡಲಿದ್ದಾರೆ. ಸ್ಮರಣ ಸಂಚಿಕೆಯನ್ನು ವಿ.ಪ ಸದಸ್ಯ ಎಸ್.ವಿ. ಸಂಕನೂರ ಬಿಡುಗಡೆಗೊಳಿಸಲಿದ್ದಾರೆ ಎಂದರು. ಲ್ಲೆಯ ಏಳು ತಾಲೂಕಿನ ಪ್ರತಿಯೊಬ್ಬರನ್ನು 'ಶಿವಶರಣೆ ಮುಕ್ತಾಯಕ್ಕ ಪ್ರಶಸ್ತಿ'ಗೆ ಆಯ್ಕೆ ಮಾಡಲಾಗಿದೆ. ನಂತರ ಚಿಂತನಾಗೋಷ್ಠಿ ಭಾಗ-1 ನಡೆಯಲಿದ್ದು, ಸಾನ್ನಿಧ್ಯವನ್ನು ಶಿವಶರಣೆ ಡಾ. ನೀಲಮ್ಮ ತಾಯಿ ವಹಿಸಿಕೊಳ್ಳಲಿದ್ದು, ಅಧ್ಯಕ್ಷತೆಯನ್ನು ಡಾ. ಅರ್ಜುನ ಗೋಳಸಂಗಿ ವಹಿಸಿಕೊಳ್ಳಲಿದ್ದಾರೆ. ವಚನ ಸಾಹಿತ್ಯಕ್ಕೆ ಗದಗ ಜಿಲ್ಲೆಯ ಮಠಮಾನ್ಯಗಳ ಕೊಡುಗೆ ಕುರಿತು ಸಿದ್ದು ಯಾಪಲಪರವಿ ಉಪನ್ಯಾಸ ನೀಡಲಿದ್ದು, '12ನೇ ಶತಮಾನದ ಆಲಕ್ಷಿತ ವಚನಕಾರ್ತಿಯರು' ಎಂಬ ವಿಷಯದ ಕುರಿತು ಡಾ. ವಿಜಯಲಕ್ಷ್ಮೀ ಗೇಟಿಯವರ ಮಾತನಾಡಲಿದ್ದಾರೆ ಎಂದು ತಿಳಿಸಿದರು.

ಚಿಂತನಾಗೋಷ್ಠಿ ಭಾಗ-2 ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರೊ. ಸೋಮರೆಡ್ಡಿ ಬಸಾಪೂರ ವಹಿಸಿಕೊಳ್ಳಲಿದ್ದಾರೆ. ಉಪನ್ಯಾಸಕರಾಗಿ ಸಿದ್ದಣ್ಣ ಜಗಭಾಳ ಆಗಮಿಸಲಿದ್ದು, ಇವರು 'ಜಾನಪದ ಸಾಹಿತ್ಯದಲ್ಲಿ ಬಸವೇಶ್ವರರು' ಎಂಬ ವಿಷಯದ ಕುರಿತು ಮಾತನಾಡಲಿದ್ದಾರೆ. ಸಾಯಂಕಾಲ 4.30ರಿಂದ ಸಮಾರೋಪ ಸಮಾರಂಭ ನಡೆಯಲಿದ್ದು, ಸಾನ್ನಿಧ್ಯವನ್ನು ಬೈರನಹಟ್ಟಿಯ ಶ್ರೀ ಶಾಂತಲಿಂಗ ಮಹಾಸ್ವಾಮೀಜಿ ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ವಹಿಸಿಕೊಳ್ಳಲಿದ್ದಾರೆ. ಸಮಾರೋಪ ನುಡಿಗಳನ್ನು ಸುಶೀಲ ಸೋಮಶೇಖರ ನುಡಿಯಲ್ಲಿದ್ದಾರೆ ಎಂದು ಸುಧಾ ಹುಚ್ಚಣ್ಣವರ ತಿಳಿಸಿದರು.

ಈ ಸಂದರ್ಭದಲ್ಲಿ ಕೆ.ಎ ಬಳಿಗೇರ, ಸೀತಾ ಬಸಾಪೂರ, ಸುಕನ್ಯಾ ಸಾಲಿ, ಪ್ರತಿಭಾ ಹೊಸಮನಿ, ಸುಲೋಚನಾ ಐಹೊಳೆ, ಅಶ್ವಿನಿ ಅಂಕಲಕೋಟಿ, ಎಸ್.ಎಂ. ಮರಿಗೌಡ್ರ, ಶೇಖಣ್ಣ ಕವಳಿಕಾಯಿ, ಪ್ರಕಾಶ ಅಸುಂಡಿ, ಪ್ರೇಮಾ ಮೇಟಿ, ಐ.ಬಿ. ಬೆನಕೊಪ್ಪ, ಎಂ.ಕೆ. ಲಮಾಣಿ, ಅಶೋಕ ಹಾದಿ, ಬೂದಪ್ಪ ಅಂಗಡಿ ಉಪಸ್ಥಿತರಿದ್ದರು.

> 1919ರಲ್ಲಿ ಲಕ್ಷ್ಮೇಶ್ವರದಲ್ಲಿ ಮೊಟ್ಟ ಮೊದಲು ಕದಳಿ ಮಹಿಳಾ ಸಮ್ಮೇಳನ ನಡೆದಿತ್ತು. 2025ರಲ್ಲಿ ಮತ್ತೆ ಗದಗ ನಗರದಲ್ಲಿ ನಡೆಯುತ್ತಿರುವುದು ಸಂತಸ ತಂದಿದೆ. ಶರಣ ಸಾಹಿತ್ಯ ಪರಿಷತ್ತನ್ನು ಸುತ್ತೂರು ಮಠದ ಡಾ. ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳು ಹುಟ್ಟು ಹಾಕಿದರು. ಶರಣರ ಮೌಲ್ಯಗಳನ್ನು ಬಿತ್ತರಿಸಿ ಸಮಾಜ ಸುಧಾರಿಸಲು ಈ ಪರಿಷತ್ತು ಉದಯವಾಗಿದೆ.
>
> – ಕೆ.ಎ. ಬಳಿಗೇರ.
> ಶ.ಸಾ.ಪ ಜಿಲ್ಲಾಧ್ಯಕ್ಷರು.

### ಮಾಜಿ ಸಚಿವ ಕಳಕಪ್ಪ ಬಂಡಿ ಜನ್ಮದಿನದ ನಿಮಿತ್ತ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ

# ಕಳಕಪ್ಪ ಬಂಡಿ ಅವಧಿಯಲ್ಲಿ ಅನುದಾನದ ಹೊಳೆ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಹಿಂದಿನ ರಾಜ್ಯ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕಾಲೇಜು ನಿರ್ಮಾಣ, ಶಿಕ್ಷಣ, ರಸ್ತೆಗಳು ಸೇರಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ನೂರಾರು ಕೋಟಿ ಅನುದಾನದ ಹೊಳೆಯನ್ನು ರೋಣ ಮತಕ್ಷೇತ್ರಕ್ಕೆ ಮಾಜಿ ಸಚಿವರಾದ ಕಳಕಪ್ಪ ಬಂಡಿ ಹರಿಸಿದ್ದಾರೆ ಎಂದು ಬಿಜೆಪಿ ಡಂಬಳ ಮಂಡಳ ಅಧ್ಯಕ್ಷ ಅಂದಪ್ಪ ಹಾರೂಗೇರಿ ಹೇಳಿದರು.

ಮಾಜಿ ಸಚಿವ ಕಳಕಪ್ಪ ಜಿ.ಬಂಡಿ ಅವರ ಜನ್ಮದಿನದ ಪ್ರಯುಕ್ತ ಬಿಜೆಪಿ ಪಕ್ಷದ ಡಂಬಳ ಮಂಡಲದ ವತಿಯಿಂದ ಡಂಬಳ ಗ್ರಾಮದ ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ನಿಲಯದ ವಿದ್ಯಾರ್ಥಿನಿಯರಿಗೆ ನೋಟ್‌ಬುಕ್ ಮತ್ತ ಪೆನ್ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಸಂಧರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಎಸ್.ಸಿ ಮೋರ್ಚಾ ಅಧ್ಯಕ್ಷ ಕೃಷ್ಣ ಬಂಡಿ, ಮಂಡಲ ಪ್ರಧಾನ ಕಾರ್ಯದರ್ಶಿ ಪ್ರಭು ಕರಮುಡಿ, ಪಂಚಾಕ್ಷರಯ್ಯ ಹ' ಲ್ರ್ ಪೂ ರ' ವ' ಂ ರ', ಬಸವರಾಜ ಚನ್ನಳ್ಳಿ, ಬಸವರಾಜ ಕೊತಂಬರಿ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಮಲ್ಲಪ್ಪ ಮಠದ, ಚಂದ್ರು ಯಳಮಲಿ, ಸಿದ್ದನಗೌಡ ಪಾಟೀಲ, ಲಿಂಗನಗೌಡ ಹರ್ತಿ, ಮೈಲಾರೆಪ್ಪ ನೋಟಗಾರ, ರವಿ ಹಡಪದ, ಶ್ರೀಕಾಂತ ರಾಯರೆಡ್ಡಿ, ಕುಬೇರಪ್ಪ ಕವಲೂರ, ಬಸವರಾಜ ಬಂಡಿ, ಯಮನೂರ ದೊಡ್ಡಮನಿ, ಸಿದ್ದಯ್ಯ ಕಾಡಸಿದ್ದೇಶ್ವರಮಠ, ವಿಜಯ ಹಾದಿಮನಿ, ಮಹಾಂತೇಶ ಬಂಡಿ, ಪಕೀರಪ್ಪ ಆನಿ, ಮುತ್ತಪ್ಪ ಮಠದ, ಮಂಜುನಾಥ ಬಿಸನಳ್ಳಿ, ಆನಂದ ನಾಲ್ಕುರವಿ, ಜಿಲ್ಲಾ ಯುವ ಮೋರ್ಚಾ ಉಪಾಧ್ಯಕ್ಷ ರಾಜೇಶ ಅರಕಾಲ, ಪ್ರಕಾಶ ಕೊತಂಬರಿ, ಪ್ರಧಾನ ಕಾರ್ಯದರ್ಶಿಗಳಾದ ಶಿವಾನಂದ ಬಂಡಿ, ನಾಗರಾಜ ನವಲಿ, ಮುತ್ತು ಚಿನ್ನಪ್ಪಗೌಡ್ರ, ಸೋಮಶೇಖರ ಹಿರೇಮಠ, ಮುದಿಯಪ್ಪ ಮುಳಗುಂದ, ಪ್ರವೀಣ ಪಾಟೀಲ, ಪ್ರಭು ಕೊರ್ಲಹಳ್ಳಿ, ವಿನಾಯಕ ರಾಠೋಡ ಸೇರಿದಂತೆ ಪಕ್ಷದ ಪದಾಧಿಕಾರಿಗಳು ಯುವಕ, ವಿದ್ಯಾರ್ಥಿಗಳು ಇದ್ದರು.



> ಪಿಆರ್‌ಡಿ, ಪಿಡಬ್ಲೂಡಿ, ಎಸ್‌ಸಿಪಿ, ಟಿಎಸ್‌ಪಿ ಸೇರಿ ವಿವಿಧ ಯೋಜನೆಗಳ ಮೂಲಕ ಯುವ ಸಮೂಹಕ್ಕೆ ಶಿಕ್ಷಣ, ಜನಸಾಮಾನ್ಯರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವದರ ಜತೆಗೆ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ, ಗ್ರಾಮೀಣ ರಸ್ತೆಗಳ ಅಭಿವೃದ್ಧಿಯ ಮೂಲಕ ಮತಕ್ಷೇತ್ರದಲ್ಲಿ ಕಳಕಪ್ಪ ಬಂಡಿ ಹೊಸ ಪರ್ವ ಸೃಷ್ಟಿಸಿದರು ಎಂದು ಅಂದಪ್ಪ ಹಾರೂಗೇರಿ ಹೇಳಿದರು.

# ಪ್ರತಿಯೊಬ್ಬರೂ ನಿಯಮಗಳನ್ನು ಪಾಲಿಸಿ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬುಧವಾರ ಶಿರಹಟ್ಟಿಯಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪಥಸಂಚಲನ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಿಎಸ್‌ಐ ಚನ್ನಯ್ಯ ದೇವೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನಿರ್ದೇಶನದಂತೆ ಗಣೇಶ ಹಬ್ಬ ಮತ್ತು ಈದ್-ಮಿಲಾದ್ ಹಬ್ಬಗಳನ್ನು ಶಾಂತಿ ಮತ್ತು ಸುವ್ಯವಸ್ಥೆಯಿಂದ ಸಾರ್ವಜನಿಕರು ಆಚರಿಸುವುದಕ್ಕೆ ಜಾಗೃತಿ ಮೂಡಿಸಲಾಗುತ್ತಿದೆ. ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಸ್ಥಾಪನೆಗೆ ಸಮಿತಿಯವರು ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಪಿಓಪಿಯಿಂದ ಮಾಡಿದ ಗಣೇಶ ಮೂರ್ತಿ, ವಿಗ್ರಹಗಳನ್ನು ಬಳಸಬಾರದು ಮತ್ತು ನಿಗದಿತ ಸ್ಥಳ ಹೊರತುಪಡಿಸಿ ಇತರ ಜಲಮೂಲಗಳಲ್ಲಿ ವಿಗ್ರಹಗಳನ್ನು ವಿಸರ್ಜಿಸಬಾರದು. ಪರಿಸ್ನೇಹಿ ಗಣಪತಿಗಳನ್ನು ಬಳಸಬೇಕು ಮತ್ತು ಸಿಎಸ್‌ಐಆರ್ ಮತ್ತು ರಾಷ್ಟ್ರೀಯ ಪರಿಸರ ಇಂಜಿನಿಯರಿಂಗ್ ಸಂಶೋಧನಾ ಸಂಸ್ಥೆಯವರು ಜಾರಿಗೊಳಿಸಿದ ಮಾರ್ಗಸೂಚಿಗಳನ್ನು, ಪರಿಸರ ಸ್ನೇಹಿ ಹಸಿರು ಪಟಾಕಿಗಳನ್ನು ಬಳಸಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಬ್ಬಗಳನ್ನು ಆಚರಿಸಬೇಕು. ಇಲಾಖೆಯ ಜಾರಿಗೊಳಿಸಿರುವಂತಹ ಎಲ್ಲ ನಿಯಮಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕೆಂದು ಹೇಳಿದರು.

ಕ್ರೈಂ ಪಿಎಸ್‌ಐ ಕಡಬಿನ, ಮತ್ತು ಕೆಎಸ್‌ಆರ್‌ಪಿ ತುಕಡಿ ಮತ್ತು ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೆಳೆ ಹಾನಿ ಪ್ರದೇಶಗಳಿಗೆ ತಹಸೀಲ್ದಾರ ಭೇಟಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಳೆಯಿಂದ ರೈತರಿಗೆ ಉಂಟಾಗಿರುವ ಬೆಳೆ ಹಾನಿ ಪರಿಹಾರ ಒದಗಿಸಿಕೊಡುವ ಸಂಬಂಧ ಗದಗ ತಾಲೂಕಿನ ಮುಳಗುಂದ ಪಟ್ಟಣದ ಜಮಿನುಗಳಿಗೆ ತಹಸೀಲ್ದಾರ ಶ್ರೀನಿವಾಸ ಮೂರ್ತಿ ಹಾಗೂ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಯ್ಯ ಕೊರವಣ್ಣವರ ಭೇಟಿ ನೀಡಿ ಪರಿಶೀಲಿಸಿದರು.

ಮುಳಗುಂದ ಪಟ್ಟಣದಲ್ಲಿನ ರೈತರ ಜಮಿನುಗಳಿಗೆ ಮಳೆಯಿಂದ ಹಾನಿಯಾದ ಹೆಸರು ಬೆಳೆ, ಗೋವಿನ ಜೋಳ, ಶೇಂಗಾ ಬೇಳೆಗಳನ್ನು ಪರಿಶೀಲಿಸಿದ ತಹಸೀಲ್ದಾರರು, ಸತತವಾಗಿ ಬಿದ್ದ ಮಳೆಯಿಂದ ರೈತರು ಬೆಳೆದ ಹೆಸರು, ಶೇಂಗಾ, ಗೋವಿನ ಜೋಳ ಬೆಳೆಗಳು ಸಂಪೂರ್ಣವಾಗಿ ನಾಶವಾಗಿವೆ. ಈ ಕುರಿತು ಜಿಲ್ಲಾಧಿಕಾರಿಗಳಿಗ ಗಮನಕ್ಕೆ ತರುತ್ತೇನೆ ಎಂದರು.

ಈ ಸಂದರ್ಭದಲ್ಲಿ ಆರ್‌ಐ ಹಡಗಲಿಮಠ, ರೈತ ಸಂಘದ ಅಧ್ಯಕ್ಷ ದೇವರಾಜ ಸಂಗನಪೇಟಿ, ಪ.ಪಂ ಸದಸ್ಯ ಮಾಹಾದೇವಪ್ಪ ಗಡಾದ, ಬಸವರಾಜ ಕರಿಗಾರ, ದೇವಪ್ಪ ಅಣ್ಣಿಗೇರಿ, ಮಾಹಾಂತೇಶ ಗುಂಜಳ, ಹಾಗೂ ರೈತ ಸಂಘದ ಸದಸ್ಯರು ಇದ್ದರು.

### ಗದಗ ಜಿಲ್ಲಾ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರ

# ಸಾಧಕರಿಗೆ, ನಿವೃತ್ತ ನೌಕರರಿಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಘಟಕವು 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ಮುಸ್ಲಿಂ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಸಾಧಕರು ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭವನ್ನು ಆ. 24ರಂದು ಮುಂಜಾನೆ 10 ಗಂಟೆಗೆ ಗದುಗಿನ ಮುಳಗುಂದ ರಸ್ತೆಯ ಕನಕ ಭವನದಲ್ಲಿ ಏರ್ಪಡಿಸಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಸೂಡಿ ಜುಕ್ತಿ ಹಿರೇಮಠದ ಪೂಜ್ಯ ಡಾ.ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು, ಅಡವೀಂದ್ರ ಸ್ವಾಮಿಮಠದ ಧರ್ಮದರ್ಶಿ ಪೂಜ್ಯ ಮಹೇಶ್ವರ ಸ್ವಾಮಿಗಳು, ಬಳಗಾನೂರಿನ ಮೌಲಾನಾ ಇನಾಯತ್‌ವುಲ್ಲಾ ಫೀರಜಾದೆ ಹಾಗೂ ಗದಗ ಗ್ರೇಸ್ ಇಸಿಐ ಚರ್ಚ್‌ನ ಸಭಾ ಪಾಲಕರಾದ ರೆವರೆಂಡ್ ವಸಂತರಾಜ ವಹಿಸುವರು. ಅಧ್ಯಕ್ಷತೆಯನ್ನು ಸಂಘದ ಜಿಲ್ಲಾ ಅಧ್ಯಕ್ಷ ಡಾ. ಸಿ.ಎಂ. ರಫೀ ವಹಿಸುವರು.

ವಿ.ಪ ಮುಖ್ಯ ಸಚೇತಕ ಸಲೀಂ ಅಹ್ಮದ್ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಕೆಪಿಸಿಸಿ ಜನರಲ್ ಸೆಕ್ರೆಟರಿ ಎಸ್.ಡಿ. ಮಕಾಂದಾರ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಉಪಾಧ್ಯಕ್ಷ ನೂರಅಹ್ಮದ್ ಕರ್ಜಗಿ, ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಸದಸ್ಯ ಎಂ.ಎಂ. ಕಾಗದಗಾರ ಆಗಮಿಸುವರು.

ಸಂಘದ ಸಂಸ್ಥಾಪಕ, ರಾಜ್ಯ ಅಧ್ಯಕ್ಷ ಮೊಹ್ಮದ್‌ಸಲೀಂ ಹಂಚಿನಮನಿ, ಪ್ರಧಾನ ಕಾರ್ಯದರ್ಶಿ ಡಾ. ಇಸ್ಮಾಯಿಲ್ ಪಾಷಾ, ಕಾರ್ಯಾಧ್ಯಕ್ಷ ಅಬ್ದುಲ್‌ಖಾದರ ಮೆಣಸಗಿ, ಉಪಾಧ್ಯಕ್ಷರಾದ ಫರಹತ ಜಲಗೇರಿ, ನಿಯಾಜಅಹ್ಮದ್ ಹಂಚಿನಮನಿ, ಡಿಡಿಪಿಐ ಆರ್. ಎಸ್. ಬುರಡಿ, ಗದಗ ಶಹರ ಬಿಇಓ ಆರ್.ವ್ಹಿ. ಶೆಟ್ಟೆಪ್ಪನವರ ಉಪಸ್ಥಿತರಿರುವರು.

ಗದಗ ಡಿಎಸ್ಪಿ ಮುರ್ತುಜಾ ಖಾದ್ರಿ 'ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಹಾಗೂ ವ್ಯಕ್ತಿತ್ವ ವಿಕಸನ' ವಿಷಯವಾಗಿ ಉಪನ್ಯಾಸ ನೀಡುವರು. ವಿಶೇಷ ಆಹ್ವಾನಿತರಾಗಿ ಇಸಿಓ ರಿಜ್ವಾನ ಅಹ್ಮದ್ ಕೌಲಗೇರಿ, ಅನ್ವರ್ ಕೋಲಾರ, ಶಬ್ಬೀರ ಮುಲ್ಲಾ ವಿಶೇಷ ಆಹ್ವಾನಿತರಾಗಿ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

> ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯ ಎಲ್ಲ ವಿಭಾಗಗಳಲ್ಲಿ ಜಿಲ್ಲೆಗೆ ಮೊದಲ ಮೂರು ಸ್ಥಾನಗಳನ್ನು ಪಡೆದವರು ಸೇರಿದಂತೆ ಎಸ್‌ಎಸ್‌ಎಲ್‌ಸಿಯಲ್ಲಿ ಶೇ.90ಕ್ಕೂ ಹೆಚ್ಚು ಹಾಗೂ ಪಿಯುಸಿಯಲ್ಲಿ ಶೇ. 85ಕ್ಕೂ ಹೆಚ್ಚು ಅಂಕಗಳನ್ನು ಪಡೆದ ಮುಸ್ಲಿಂ ಸಮಾಜದ ವಿದ್ಯಾರ್ಥಿಗಳ ಮಾಹಿತಿಯನ್ನು ಈಗಾಗಲೇ ಸಂಗ್ರಹಿಸಿದ್ದು, ಹೆಸರು ತಪ್ಪಿಹೋದವರು ಅಂಕಪಟ್ಟಿಯ ಝರಾಕ್ಸ್ ಪ್ರತಿ, ಮೊಬೈಲ್ ನಂಬರ್‌ನೊಂದಿಗೆ ತಮ್ಮ ಹೆಸರುಗಳನ್ನು ಡಾ. ಸಿ.ಎಂ. ರಫೀ-9060919915, ರಶೀದ್-9916565819, ನಿಯಾಜ್ ಹಂಚಿನಮನಿ-9900212424 ಇವರಲ್ಲಿ ಆ. 22ರೊಳಗಾಗಿ ನೋಂದಾಯಿಸಲು ಕೋರಲಾಗಿದೆ.

# ಲಯನ್ಸ್ ಕ್ಲಬ್‌ನಿಂದ ಸಸಿ ನೆಡುವ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಲಯನ್ ಲೇಡೀಸ್ ಕ್ಲಬ್ ಸಹಯೋಗದಲ್ಲಿ ನಗರದ ಲಯನ್ಸ್ ಸ್ಕೂಲ್ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು. ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ-ಶಿಕ್ಷಕಿಯರು ಹಾಗೂ ವಿದ್ಯಾರ್ಥಿಗಳು ಈ ಕಾರ್ಯಕ್ಕೆ ಸಾಥ್ ನೀಡಿದರು. ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ ಸಂದರ್ಭೋಚಿತವಾಗಿ ಮಾತನಾಡಿ, ಪರಿಸರ ಸಮತೋಲನ ಕಾಯ್ದುಕೊಳ್ಳಲು ಗಿಡ-ಮರಗಳ ಅವಶ್ಯಕತೆಯನ್ನು ವಿವರಿಸಿದರು. ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಕೋಶಾಧ್ಯಕ್ಷ ರೇಣುಕಪ್ರಸಾದ ಹಿರೇಮಠ, ಲಯನ್ ಲೇಡೀಸ್ ಕ್ಲಬ್ ಅಧ್ಯಕ್ಷೆ ಪೂಜಾ ಪಾಟೀಲ, ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಕೋಶಾಧ್ಯಕ್ಷೆ ಸ್ನೇಹಾ ಹಿರೇಮಠ ಸೇರಿದಂತೆ ಡಾ. ಜಗದೀಶ ಶಿರೋಳ, ಅಶ್ವಥ್ ಸುಲಾಖೆ, ಜೆ.ಡಿ. ಉತ್ತರಕರ, ರಮೇಶ ಶಿಗ್ಲಿ, ಪ್ರವೀಣ ವಾರಕರ, ನಿತೀಶ್ ಸಾಲಿ, ಅರವಿಂದ ಪಟೇಲ್, ರಘು ಮೇಹರವಾಡೆ, ಎಸ್.ಡಿ. ಪಾಟೀಲ, ವೀರೇಶ ಪಟ್ಟಣಶೆಟ್ಟಿ ಮುಂತಾದವರಿದ್ದರು.





ಗದಗ-ಬೆಟಗೇರಿ ನಗರಸಭೆಯ ನೆರೆಹೊರೆ ಗುಂಪು ಪ್ರದೇಶಸಭಾ ಮತ್ತು ವಾರ್ಡ್ ಸಮಿತಿಗಳ ರಚನೆಯ ಸಭೆಯನ್ನು ನಗರಸಭೆಯ ಎಲ್ಲಾ ಚುನಾಯಿತ ಸದಸ್ಯರ ಉಪಸ್ಥಿತಿಯಲ್ಲಿ ಬುಧವಾರ ಜರುಗಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka